

Volume : 9 | Issue : 177 | October : 01 : 2026 : Thursday
ಸಂಪುಟ : 9 | ಸಂಚಿಕೆ : 177 | ಅಕ್ಟೋಬರ್ : 01 : 2026 : ಗುರುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ಟಿ.ನರಸೀಪುರ ತಾಲೂಕಿನ ಐತಿಹಾಸಿಕ ಸೋಮನಾಥಪುರ ದೇವಾಲಯದ ಬಳಿ ನಡೆಯುತ್ತಿರುವ 'ಧರ್ಮನ್' ಚಿತ್ರದ ಚಿತ್ರೀಕರಣದಲ್ಲಿ ನಟ ರಜನಿಕಾಂತ್ ಹಾಗೂ ನಟಿ ಶ್ರೀಲೀಲಾ ಪಾಲ್ಗೊಂಡರು.

ಅಡಕೆ ಹಾಳೆ ಬಳಸಿ ಎಥೆನಾಲ್ ಉತ್ಪಾದನೆ: ಮಂಗಳೂರು ವಿವಿ ವಿದ್ಯಾರ್ಥಿಗಳ ಪ್ರಯೋಗ ಯಶಸ್ವಿ ಪುಟ 4

'ಬರ ಪರಿಹಾರ ನೀಡಿಲ್ಲ, ಜನತಾ ನ್ಯಾಯಾಲಯಕ್ಕೆ ಹೋಗುತ್ತೇವೆ' ಪುಟ 3

■ ಸುದ್ದಿ ಚುಟುಕು

## ಗಿಲ್‌ಗೆ ಶತಕದ ದಾಖಲೆ; ರೋಹಿತ್‌ಗೆ 12 ಸಾವಿರ ರನ್ ಮೈಲಿಗಲ್ಲು

● ವಿಕ್ರಮ ವಾಹಿನಿ । ಗುವಾಹಟಿ

ವೆಸ್ಟ್ ಇಂಡೀಸ್ ವಿರುದ್ಧ ನಡೆಯುತ್ತಿರುವ ಎರಡನೇ ಏಕದಿನ ಪಂದ್ಯದಲ್ಲಿ ಶುಭ್‌ಮನ್ ಗಿಲ್ ಹಾಗೂ ರೋಹಿತ್ ಶರ್ಮಾ ಭರ್ಜರಿ ಶತಕ ಸಿಡಿಸುವ ಮೂಲಕ ಗಮನ ಸೆಳೆದಿದ್ದಾರೆ. ಗಿಲ್ ಕೇವಲ 62 ಎಸೆತಗಳಲ್ಲಿ ಶತಕ ಪೂರೈಸಿ, ಭಾರತೀಯ ನಾಯಕನೊಬ್ಬನಿಂದ ಏಕದಿನ ಕ್ರಿಕೆಟ್‌ನಲ್ಲಿ ದಾಖಲಾದ ಅತಿ ವೇಗದ ಶತಕದ ಮೈಲಿಗಲ್ಲು ತಲುಪಿದ್ದಾರೆ.

ರೋಹಿತ್ ಶರ್ಮಾ ಕೂಡ ಶತಕ ಸಿಡಿಸಿದ್ದು, ಏಕದಿನ ಕ್ರಿಕೆಟ್‌ನಲ್ಲಿ 12,000 ರನ್ ಪೂರೈಸಿದ ಮೂರನೇ ಭಾರತೀಯ ಬ್ಯಾಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

406 ರನ್‌ಗಳ ಗುರಿ ಬೆನ್ನತ್ತಿರುವ ಭಾರತ 28 ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ 270 ರನ್ ಗಳಿಸಿತ್ತು. ರೋಹಿತ್ 101 ರನ್ ಗಳಿಸಿ ಔಟಾಗಿದ್ದು, ಗಿಲ್ 92 ಎಸೆತಗಳಲ್ಲಿ 18 ಬೌಂಡರಿ ಹಾಗೂ 6 ಸಿಕ್ಸರ್‌ಗಳ ನೆರವಿನಿಂದ 153 ರನ್ ಗಳಿಸಿ ಅಜೇಯರಾಗಿದ್ದರು. ವಿರಾಟ್ ಕೊಹ್ಲಿ 2 ರನ್ ಗಳಿಸಿ ಕ್ರೀಸ್‌ನಲ್ಲಿದ್ದರು.

ಇದಕ್ಕೂ ಮುನ್ನ ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ 50 ಓವರ್‌ಗಳಲ್ಲಿ 7 ವಿಕೆಟ್‌ಗೆ 405 ರನ್ ಗಳಿಸಿತು. ಆರಂಭಿಕ ಜಾನ್ ಕ್ಯಾಂಪ್‌ಬೆಲ್ 65 ಎಸೆತಗಳಲ್ಲಿ ಶತಕ ಸಿಡಿಸಿ, ಭಾರತದ ವಿರುದ್ಧ ವೆಸ್ಟ್ ಇಂಡೀಸ್ ಆಟಗಾರನೊಬ್ಬ ದಾಖಲಿಸಿದ ವೇಗದ ಏಕದಿನ ಶತಕದ ದಾಖಲೆ ನಿರ್ಮಿಸಿದರು.

ನಾಯಕ ಶಾಯ್ ಹೋಪ್ 104 ರನ್ ಹಾಗೂ ಅಮೀರ್ ಜಂಗೂ 114 ರನ್ ಗಳಿಸಿದರು. ಜಂಗೂ 70 ಎಸೆತಗಳಲ್ಲಿ ಶತಕ ಪೂರೈಸಿದ್ದರು. ಭಾರತದ ಪರ ಗುರುನೂರ್ ಬ್ರಾರ್, ಕುಲದೀಪ್ ಯಾದವ್ ಹಾಗೂ ರವೀಂದ್ರ ಜಡೇಜಾ ತಲಾ ಎರಡು ವಿಕೆಟ್ ಪಡೆದರು. ಈ ಪಂದ್ಯದಲ್ಲಿ ಕುಲದೀಪ್ ಯಾದವ್ 200 ಏಕದಿನ ವಿಕೆಟ್‌ಗಳ ಮೈಲಿಗಲ್ಲು ತಲುಪಿದರು.

## ಪಟಾಕಿಗೆ ಸಂಪೂರ್ಣ ನಿಷೇಧವಿಲ್ಲ; 24 ಗಂಟೆ ಸಿಡಿಸಲು ಅವಕಾಶವೂ ಇಲ್ಲ

● ವಿಕ್ರಮ ವಾಹಿನಿ । ನವದೆಹಲಿ

ದೀಪಾವಳಿ ಸಂದರ್ಭದಲ್ಲಿ ಪಟಾಕಿಗಳ ಬಳಕೆಗೆ ಸಂಪೂರ್ಣ ನಿಷೇಧ ವಿಧಿಸುವುದಿಲ್ಲ. ಅದೇ ವೇಳೆ ದಿನದ 24 ಗಂಟೆಯೂ ಪಟಾಕಿ ಸಿಡಿಸಲು ಅವಕಾಶ ನೀಡುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಬುಧವಾರ ಸ್ಪಷ್ಟಪಡಿಸಿದೆ. ಪಟಾಕಿಗಳ ಬಳಕೆಗೆ ನಿರ್ದಿಷ್ಟ ಸಮಯ ನಿಗದಿಪಡಿಸುವ ಮೂಲಕ ಸಮತೋಲನದ ಪರಿಹಾರ ಕಂಡುಕೊಳ್ಳಬೇಕಿದೆ ಎಂದು ನ್ಯಾಯಮೂರ್ತಿಗಳಾದ ಎಂ.ಎಂ. ಸುಂದರೇಶ್ ಮತ್ತು ಪಿ.ಬಿ. ವರಾಲೆ ಅವರ ಪೀಠ ತಿಳಿಸಿತು.

ಪಟಾಕಿಗೆ ಸಂಪೂರ್ಣ ನಿಷೇಧ ಹೇರಿದರೆ ದೀಪಾವಳಿ ಆಚರಣೆಗೆ ಸಂಬಂಧಿಸಿದ ಜನರ ಭಾವನೆಗಳಿಗೆ ಧಕ್ಕೆಯಾಗಬಹುದು. ಆದರೆ ದಿನವಿಡೀ ಪಟಾಕಿ ಸಿಡಿಸಲು ಅವಕಾಶ ನೀಡುವುದರಿಂದ ವಾಯುಮಾಲಿನ್ಯ ಹೆಚ್ಚುವುದಲ್ಲದೆ ಮಕ್ಕಳು, ಹಿರಿಯರು ಹಾಗೂ ಅನಾರೋಗ್ಯದಿಂದ ಬಳಲುತ್ತಿರುವವರ ಮೇಲೆ ಪರಿಣಾಮ ಬೀರಬಹುದು ಎಂದು ಪೀಠ ಅಭಿಪ್ರಾಯಪಟ್ಟಿತು.

ಪಟಾಕಿ ಬಳಕೆಗೆ ನಿರ್ದಿಷ್ಟ ಸಮಯ ನಿಗದಿಪಡಿಸುವ ಕುರಿತು ನ್ಯಾಯಾಲಯ ಚಿಂತನೆ ನಡೆಸಿದೆ. ಯಾವ ಪಟಾಕಿಗಳಿಗೆ ಹಾಗೂ ಯಾವ ಅವಧಿಯಲ್ಲಿ ಅನುಮತಿ ನೀಡಬೇಕು ಎಂಬುದನ್ನು ಪರಿಸರ ಮತ್ತು ಆರೋಗ್ಯದ ಅಂಶಗಳನ್ನು ಪರಿಗಣಿಸಿ ನಿರ್ಧರಿಸಲಾಗುವುದು ಎಂದು ತಿಳಿಸಿತು.

ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯಾ ಭಾಟಿ ಅವರು ಬೇರಿಯಂ ಆಧಾರಿತ ಪಟಾಕಿಗಳ ಕುರಿತು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿ ಸಲ್ಲಿಸಲು ಅಕ್ಟೋಬರ್ 15ರವರೆಗೆ ಕಾಲಾವಕಾಶ ಕೋರಿದರು. ಬೇರಿಯಂ ಹೊಂದಿರುವ ಪಟಾಕಿಗಳ ಹೊರಾಂಗಣ ಪರೀಕ್ಷೆ ಇನ್ನೂ ನಡೆಯಬೇಕಿದೆ ಎಂದು ಅವರು ತಿಳಿಸಿದರು.

ದೀಪಾವಳಿ ಸಂದರ್ಭದಲ್ಲಿ ಪಟಾಕಿಗಳಿಂದ ಉಂಟಾಗುವ ಮಾಲಿನ್ಯದ ಜೊತೆಗೆ ಬೆಳೆ ತ್ಯಾಜ್ಯ ಸುಡುವಿಕೆಯಿಂದ ಉಂಟಾಗುವ ವಾಯುಮಾಲಿನ್ಯದ ವಿಚಾರವೂ ವಿಚಾರಣೆ ವೇಳೆ ಪ್ರಸ್ತಾಪವಾಯಿತು. ಹೀಗಾಗಿ ಹಬ್ಬದ ಆಚರಣೆಗೆ ಅವಕಾಶ ನೀಡುವುದರ ಜತೆಗೆ ಪರಿಸರ ಹಾಗೂ ಸಾರ್ವಜನಿಕ ಆರೋಗ್ಯದ ಮೇಲಿನ ಪರಿಣಾಮವನ್ನು ಕಡಿಮೆ ಮಾಡುವ ಕ್ರಮಗಳ ಅಗತ್ಯವನ್ನು ನ್ಯಾಯಪೀಠ ಒತ್ತಿಹೇಳಿತು.

# ಕಾಕ್‌ಪಿಟ್‌ನಲ್ಲಿ ಪೈಲಟ್‌ಗಳ ರಕ್ತಸಿಕ್ತ ಮಾರಾಮಾರಿ

● ವಿಕ್ರಮ ವಾಹಿನಿ । ಟೆಲ್ ಅವಿವ್

ದುಬೈನಿಂದ ಟೆಲ್ ಅವಿವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದ ಕಾಕ್‌ಪಿಟ್‌ನಲ್ಲಿ ಪೈಲಟ್‌ಗಳ ನಡುವೆ ನಡೆದ ತೀವ್ರ ಸಂಘರ್ಷದಿಂದ ಆತಂಕದ ಪರಿಸ್ಥಿತಿ ನಿರ್ಮಾಣವಾಗಿದ್ದು, ಭಾರತೀಯ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಚಾಕು ಇರಿತಕ್ಕೊಳಗಾಗಿದ್ದಾರೆ. ಸಹಪೈಲಟ್ ವಿಮಾನದ ನಿಯಂತ್ರಣಕ್ಕೆ ಅಡ್ಡಿಪಡಿಸಲು ಯತ್ನಿಸಿದ ಸಂದರ್ಭದಲ್ಲಿ ಮಚ್ಚಾರ್ ಅವರನ್ನು ಎದುರಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ನೆರವಾದರು ಎಂದು ವರದಿಗಳು ತಿಳಿಸಿವೆ.

ಫ್ಲೈದುಬೈಯ ಎಫ್‌ಝಡ್1073 ವಿಮಾನದಲ್ಲಿ ಸುಮಾರು 180 ಮಂದಿ ಪ್ರಯಾಣಿಸುತ್ತಿದ್ದರು. ಸಂಘರ್ಷದ ವೇಳೆ ವಿಮಾನದ ಎತ್ತರದಲ್ಲಿ ತೀವ್ರ ಕುಸಿತ ಕಂಡುಬಂದಿದ್ದು, ಬಳಿಕ ತುರ್ತು ಸಂಕೇತ ರವಾನಿಸಲಾಯಿತು. ಘಟನೆಯಿಂದ ಅಪಹರಣದ ಆತಂಕವೂ ಉಂಟಾಗಿತ್ತು. ನಂತರ ವಿಮಾನವನ್ನು ಸೌದಿ ಅರೇಬಿಯಾದ ತಬೂಕ್ ವಿಮಾನ ನಿಲ್ದಾಣಕ್ಕೆ ತಿರುಗಿಸಿ ಸುರಕ್ಷಿತವಾಗಿ ಇಳಿಸಲಾಯಿತು. ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ಫ್ಲೈದುಬೈ ತಿಳಿಸಿದೆ.

ಘರ್ಷಣೆಯಲ್ಲಿ ಮಚ್ಚಾರ್ ಗಾಯಗೊಂಡಿದ್ದು, ಅವರನ್ನು ಹಾಗೂ ಸಹಪೈಲಟ್‌ನನ್ನು ತಬೂಕ್‌ನಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆಯ ನಿಖರ ಕಾರಣ



ಹಾಗೂ ಕಾಕ್‌ಪಿಟ್‌ನಲ್ಲಿ ನಡೆದ ಬೆಳವಣಿಗೆಗಳ ಕುರಿತು ತನಿಖೆ ಮುಂದುವರಿದಿದೆ.

**9,750ಕ್ಕೂ ಹೆಚ್ಚು ಗಂಟೆ ಹಾರಾಟ:** ಭಾರತೀಯ ಪ್ರಜೆಯಾದ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ 2022ರಲ್ಲಿ ಫ್ಲೈದುಬೈಗೆ ಸೇರುವ ಮುನ್ನ ಸ್ಪೈಸ್‌ಜೆಟ್‌ನಲ್ಲಿ ಸುಮಾರು 11 ವರ್ಷ ಕಾರ್ಯನಿರ್ವಹಿಸಿದ್ದರು. ಅಲ್ಲಿ ಲೈನ್ ಟ್ರೈನಿಂಗ್ ಕ್ಯಾಪ್ಟನ್ ಆಗಿಯೂ ಸೇವೆ ಸಲ್ಲಿಸಿದ್ದರು. ಅವರ ವೃತ್ತಿಪರ ವಿವರಗಳ ಪ್ರಕಾರ, ಬೋಯಿಂಗ್ 737–800 ಹಾಗೂ 737 ಮ್ಯಾಕ್ಸ್ ವಿಮಾನಗಳಲ್ಲಿ 9,750ಕ್ಕೂ ಹೆಚ್ಚು ಗಂಟೆಗಳ ಹಾರಾಟದ ಅನುಭವ ಹೊಂದಿದ್ದಾರೆ.

**ದುಬೈನಿಂದ ಇಸ್ರೇಲ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದ ಕಾಕ್‌ಪಿಟ್‌ನಲ್ಲಿ ಇಬ್ಬರು ಪೈಲಟ್‌ಗಳ ನಡುವೆ ತೀವ್ರ ಜಗಳ ನಡೆದು, ರಕ್ತಸಿಕ್ತ ಮಾರಾಮಾರಿ ನಡೆದಿದೆ ಎನ್ನಲಾಗಿದೆ. ಈ ವೇಳೆ '7500' ಹೈಜಾಕ್ ಎಚ್ಚರಿಕೆ ಸಂಕೇತ ರವಾನೆಯಾಗಿದ್ದು, ವಿಮಾನವನ್ನು ಸೌದಿ ಅರೇಬಿಯಾದ ತಬುಕ್‌ಗೆ ತಿರುಗಿಸಿ ಸುರಕ್ಷಿತವಾಗಿ ಇಳಿಸಲಾಗಿದೆ. ವಿಮಾನದಲ್ಲಿದ್ದ 180 ಪ್ರಯಾಣಿಕರು ಸುರಕ್ಷಿತವಾಗಿದ್ದು, ಘಟನೆಯ ಕುರಿತು ತನಿಖೆ ಮುಂದುವರಿದಿದೆ.**

ವಿಮಾನದಲ್ಲಿ ನಡೆದ ಸಂಘರ್ಷದ ಬಳಿಕ ಪ್ರಯಾಣಿಕರು ಹಾಗೂ ಸಿಬ್ಬಂದಿ ಪರಿಸ್ಥಿತಿಯನ್ನು ನಿಯಂತ್ರಿಸಲು ನೆರವಾದರು ಎಂದು ವರದಿಯಾಗಿದೆ.

ಘಟನೆಯ ಕುರಿತು ಸೌದಿ ಮತ್ತು ಇಸ್ರೇಲ್ ಅಧಿಕಾರಿಗಳು ತನಿಖೆ ನಡೆಸುತ್ತಿದ್ದು, ಫ್ಲೈದುಬೈ ಕೂಡ ತನಿಖೆಗೆ ಸಹಕರಿಸುತ್ತಿದೆ.

## ಪಶುವೈದ್ಯಾಧಿಕಾರಿ ಪರೀಕ್ಷೆಗೂ ಮುನ್ನ ಪ್ರಶ್ನೆಪತ್ರಿಕೆ ಸೋರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆ ನಡೆಯುವ ಒಂದು ದಿನ ಮುನ್ನವೇ ಉತ್ತರ ಸಹಿತ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿತ್ತು ಎಂಬುದು ಜಾರಿ ನಿರ್ದೇಶನಾಲಯದ (ಇ.ಡಿ.) ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಪ್ರಕರಣದಲ್ಲಿ ಪ್ರಮುಖ ಆರೋಪಿ ಬಸವರಾಜ ಕನ್ನಾಳೆ ಹಾಗೂ ಪರೀಕ್ಷೆಯ ಸಂದರ್ಭದಲ್ಲಿ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರನ್ನು ಬಂಧಿಸಿರುವ ಇ.ಡಿ., ಇಬ್ಬರನ್ನು ಕಸ್ಟಡಿಗೆ ಪಡೆದು ವಿಚಾರಣೆ ನಡೆಸಿದೆ. ತನಿಖೆಯಲ್ಲಿ ಪರೀಕ್ಷಾ ಅಕ್ರಮಕ್ಕೆ ಸಂಬಂಧಿಸಿದ ಹಲವು ಮಾಹಿತಿಗಳು ಪತ್ತೆಯಾಗಿವೆ ಎಂದು ಸಂಸ್ಥೆ ತಿಳಿಸಿದೆ.

ಇ.ಡಿ. ಪ್ರಕಾರ, ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ಗೌಪ್ಯವಾಗಿರಬೇಕಿದ್ದ ಪ್ರಶ್ನೆ ಪತ್ರಿಕೆಯನ್ನು ಉತ್ತರ ಸಹಿತವಾಗಿ ಬಸವರಾಜ ಕನ್ನಾಳೆಗೆ ತಲುಪಿಸಿದ್ದರು ಎನ್ನಲಾಗಿದೆ. ಬಳಿಕ ಕನ್ನಾಳೆ ಹಾಗೂ ಆತನ ಸಹಚರರು ಅಭ್ಯರ್ಥಿಗಳನ್ನು ಬೆಂಗಳೂರಿನ ಹೊರವಲಯದ ರೆಸಾರ್ಟ್‌ಗೆ ಕರೆದೊಯ್ದು ಪ್ರಶ್ನೆ ಪತ್ರಿಕೆ ಹಾಗೂ ಉತ್ತರಗಳನ್ನು ನೋಡುವ ಅವಕಾಶ ಕಲ್ಪಿಸಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ. 2ನೇ ಪುಟಕ್ಕೆ...

# 11 ದಿನಗಳ ನಿಗೂಢ ನಾಪತ್ತೆ; ಕೆರೆಯಲ್ಲಿ ಶವ ಪತ್ತೆ

**11 ದಿನಗಳಿಂದ ನಾಪತ್ತೆಯಾಗಿದ್ದ ಚನ್ನರಾಯಪಟ್ಟಣ ತಾಲೂಕಿನ ಗೃಹಿಣಿ ಜಯಶೀಲಾ ಅವರ ಮೃತದೇಹ ತುಮಕೂರು ಜಿಲ್ಲೆಯ ಕೋಲಾಳ ಗ್ರಾಮದ ಕೆರೆಯಲ್ಲಿ ಪತ್ತೆಯಾಗಿದೆ. ಸಾವಿನ ಸುತ್ತ ಹಲವು ಅನುಮಾನಗಳು ವ್ಯಕ್ತವಾಗಿದ್ದು, ಪತಿ ಹಾಗೂ ಎರಡೂ ಕುಟುಂಬಗಳು ಪರಸ್ಪರ ಆರೋಪ–ಪ್ರತ್ಯಾರೋಪ ಮಾಡಿವೆ. ಪ್ರಕರಣವನ್ನು ಹಾಸನ ಜಿಲ್ಲೆಗೆ ವರ್ಗಾಯಿಸಿ ತನಿಖೆ ನಡೆಸಲು ಪೊಲೀಸರು ಮುಂದಾಗಿದ್ದಾರೆ.**

● ವಿಕ್ರಮ ವಾಹಿನಿ । ಹಾಸನ

ಕಳೆದ 11 ದಿನಗಳಿಂದ ನಾಪತ್ತೆಯಾಗಿದ್ದ ಚನ್ನರಾಯಪಟ್ಟಣ ತಾಲೂಕಿನ ಗೃಹಿಣಿ ಜಯಶೀಲಾ ಬಿ.ಕೆ. ಅಲಿಯಾಸ್ ಪ್ರಿಯಾಂಕಾ ಅವರ ಮೃತದೇಹ ತುಮಕೂರು ಜಿಲ್ಲೆಯ ತುರುವೇಕೆರೆ ತಾಲೂಕಿನ ಕೋಲಾಳ ಗ್ರಾಮದ ಕೆರೆಯಲ್ಲಿ ಬುಧವಾರ ಪತ್ತೆಯಾಗಿದೆ. ಸಾವಿನ ಕಾರಣದ ಬಗ್ಗೆ ಹಲವು ಅನುಮಾನಗಳು ವ್ಯಕ್ತವಾಗಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಸೆ.19ರ ರಾತ್ರಿ ಪತಿ ರಾಜಶೇಖರ್ ಜತೆಗಿದ್ದಾಗ ಚನ್ನರಾಯಪಟ್ಟಣ ತಾಲೂಕಿನ ಚಿಕ್ಕನಾಯಕನಹಳ್ಳಿ ಬಳಿ ಹೇಮಾವತಿ ನಾಲೆಗೆ ಜಿಗಿದಿದ್ದರು ಎನ್ನಲಾಗಿತ್ತು. ಬಳಿಕ ಪೊಲೀಸರು, ಅಗ್ನಿಶಾಮಕ ದಳ ಹಾಗೂ ಕುಟುಂಬಸ್ಥರು ವ್ಯಾಪಕ ಶೋಧ ನಡೆಸಿದ್ದರು. ನಾಲೆಗೆ ನೀರು ಹರಿವು ಸ್ಥಗಿತಗೊಳಿಸಿ, ಸುತ್ತಮುತ್ತಲಿನ ಕೆರೆಗಳು ಹಾಗೂ ನೀರು ತುಂಬುವ ಪ್ರದೇಶಗಳಲ್ಲಿ ಹುಡುಕಾಟ ನಡೆಸಲಾಗಿತ್ತು. ತುರುವೇಕೆರೆ ಮತ್ತು ತಿಪಟೂರು ಭಾಗದಲ್ಲಿ ಡ್ರೋನ್ ಮೂಲಕವೂ ಶೋಧ ನಡೆಸಲಾಗಿತ್ತು. ಅಂತಿಮವಾಗಿ



ಕೋಲಾಳ ಕೆರೆಯಲ್ಲಿ ಮೃತದೇಹ ಪತ್ತೆಯಾಗಿದೆ.

**ವರದಕ್ಷಿಣೆ ಕಿರುಕುಳ ಆರೋಪ:** ಬಾಗೂರು ಗ್ರಾಮದ ಕೃಷ್ಣಸ್ವಾಮಿ ಮತ್ತು ಶೋಭ ದಂಪತಿಯ ಪುತ್ರಿಯಾಗಿದ್ದ ಜಯಶೀಲಾ ಎಂಟು ತಿಂಗಳ ಹಿಂದೆ ಕುರುವಂಕ ಗ್ರಾಮದ ರಾಜಶೇಖರ್ ಅವರನ್ನು ವಿವಾಹವಾಗಿದ್ದರು. ಕೆಎಎಸ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದ ಅವರು ಎರಡೂವರೆ ತಿಂಗಳ ಗರ್ಭಿಣಿಯಾಗಿದ್ದರು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಪತಿ ವರದಕ್ಷಿಣೆಗಾಗಿ ಕಿರುಕುಳ ನೀಡುತ್ತಿದ್ದರೆಂದು ಆರೋಪಿಸಿರುವ ಜಯಶೀಲಾ ಕುಟುಂಬಸ್ಥರು, ಈ ಹಿಂದೆ ರಾಜಿ ಸಂಧಾನವೂ ನಡೆದಿತ್ತು. ಆಸ್ಪತ್ರೆಗೆ ಕರೆದೊಯ್ಯುವ ನೆಪದಲ್ಲಿ ರಾಜಶೇಖರ್ ಅವರೇ ಜಯಶೀಲಾಳನ್ನು ಕೊಲೆ ಮಾಡಿದ್ದಾರೆ ಎಂದು ಪೋಷಕರು ಆರೋಪಿಸಿದ್ದಾರೆ.

**ಪತಿಯ ಕುಟುಂಬದ ಪ್ರತ್ಯಾರೋಪ:** ಇದಕ್ಕೆ ಪ್ರತಿಯಾಗಿ ರಾಜಶೇಖರ್ ಕುಟುಂಬಸ್ಥರು ಜಯಶೀಲಾ ಕುಟುಂಬದ ವಿರುದ್ಧ ಆರೋಪ ಮಾಡಿದ್ದಾರೆ. ಜಯಶೀಲಾಗೆ ಈ ಹಿಂದೆ ಮದುವೆಯಾಗಿದ್ದ ವಿಚಾರವನ್ನು ಮುಚ್ಚಿಟ್ಟು ರಾಜಶೇಖರ್ ಅವರೊಂದಿಗೆ ವಿವಾಹ ಮಾಡಲಾಗಿತ್ತು. ವಿವಾಹದ ದಿನವೇ ಮೊದಲ ಪತಿ ಪೊಲೀಸರೊಂದಿಗೆ ಕಲ್ಯಾಣ ಮಂಟಪಕ್ಕೆ ಬಂದಿದ್ದರೂ, ಆಕೆಯ ಪೋಷಕರು ಬಲವಂತವಾಗಿ ಮದುವೆ ಮಾಡಿಸಿದ್ದರು ಎಂದು ಅವರು ಆರೋಪಿಸಿದ್ದಾರೆ.

**ತನಿಖೆ ಬಳಿಕ ಸತ್ಯ ಬಯಲು:** ಜಯಶೀಲಾ ನಾಪತ್ತೆ ಪ್ರಕರಣ ಚನ್ನರಾಯಪಟ್ಟಣ ಠಾಣೆಯಲ್ಲಿ ದಾಖಲಾಗಿದ್ದು, ತುರುವೇಕೆರೆ ತಾಲೂಕಿನ ಕೆರೆಯಲ್ಲಿ ಮೃತದೇಹ ಪತ್ತೆಯಾಗಿರುವ ಮಾಹಿತಿ ಲಭಿಸಿದೆ. ಪ್ರಕರಣವನ್ನು ಹಾಸನ ಜಿಲ್ಲೆಗೆ ವರ್ಗಾಯಿಸಿಕೊಂಡು ತನಿಖೆ ನಡೆಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಜಯಶೀಲಾ ಸಾವು ಆಕಸ್ಮಿಕವೋ, ಆತ್ಮಹತ್ಯೆಯೋ ಅಥವಾ ಕೊಲೆಯೋ ಎಂಬುದು ತನಿಖೆಯಿಂದಷ್ಟೇ ಸ್ಪಷ್ಟವಾಗಬೇಕಿದೆ. ಮೃತದೇಹದ ಮರಣೋತ್ತರ ಪರೀಕ್ಷೆ ಹಾಗೂ ತನಿಖೆಯ ಮುಂದಿನ ಬೆಳವಣಿಗೆಗಳಿಂದ ಸಾವಿನ ನಿಖರ ಕಾರಣ ತಿಳಿದುಬರಲಿದೆ.

## ಮಹಾಜನ್ ವರದಿ ಅನುಷ್ಠಾನಕ್ಕೆ ಬೆಳಗಾವಿ ಪಾಲಿಕೆ ಸಮ್ಮತಿ

● ವಿಕ್ರಮ ವಾಹಿನಿ । ಬೆಳಗಾವಿ

ಕರ್ನಾಟಕ–ಮಹಾರಾಷ್ಟ್ರ ಗಡಿ ವಿವಾದಕ್ಕೆ ಸಂಬಂಧಿಸಿದ ಮಹಾಜನ್ ವರದಿಯನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸುವಂತೆ ಆಗ್ರಹಿಸಿ ಬೆಳಗಾವಿ ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಬುಧವಾರ ಸರ್ವಾನುಮತದ ನಿರ್ಣಯ ಅಂಗೀಕರಿಸಲಾಯಿತು. ನಿರ್ಣಯ ಅಂಗೀಕಾರವಾಗುತ್ತಿದ್ದಂತೆ ಕನ್ನಡಪರ ಸಂಘಟನೆಗಳು ಪಾಲಿಕೆ ಆವರಣದ ಎದುರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದವು.

ಮೇಯರ್ ಪ್ರೀತಿ ಕಾಮಕರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಒಟ್ಟು 16 ವಿಷಯಗಳ ಪೈಕಿ ಗಡಿ ವಿಚಾರ 10ನೇ ಅಜೆಂಡಾದಲ್ಲಿತ್ತು. ಇತರ ವಿಷಯಗಳ ಚರ್ಚೆ ಪೂರ್ಣಗೊಂಡ ಬಳಿಕ ಸಂಜೆ 6.30ರ ಸುಮಾರಿಗೆ ಈ ವಿಷಯವನ್ನು ಕೈಗೆತ್ತಿಕೊಳ್ಳಲಾಯಿತು. 3ನೇ ಪುಟಕ್ಕೆ...

## ರಾಜಧಾನಿಯಲ್ಲಿ ವಿದ್ಯಾರ್ಥಿಗಳ ಗಲಾಟೆ ಕೊಲೆಯಲ್ಲಿ ಅಂತ್ಯ

● ವಿಕ್ರಮ ವಾಹಿನಿ । ಬೆಂಗಳೂರು

ಕಾಲೇಜು ವಿದ್ಯಾರ್ಥಿಗಳ ನಡುವಿನ ಗಲಾಟೆ ಕೊಲೆಯಲ್ಲಿ ಅಂತ್ಯಗೊಂಡ ಘಟನೆ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ದೀಪಾ ಕಾಂಪ್ಲೆಕ್ಸ್ ಬಳಿ ಬುಧವಾರ ನಡೆದಿದೆ. ಖಾಸಗಿ ಕಾಲೇಜಿನ ಪ್ರಥಮ ವರ್ಷದ ಬಿಕಾಂ ವಿದ್ಯಾರ್ಥಿ ಯೋಗೀಶ್ (19) ಚಾಕು ಇರಿತದಿಂದ ಮೃತಪಟ್ಟಿದ್ದಾರೆ.

ಮಧ್ಯಾಹ್ನ 2ರ ಸುಮಾರಿಗೆ ಅದೇ ಕಾಲೇಜಿನ ವಿದ್ಯಾರ್ಥಿಯೊಬ್ಬ ಯೋಗೀಶ್‌ಗೆ ಕರೆ ಮಾಡಿ ಹೊರಗೆ ಬರುವಂತೆ ತಿಳಿಸಿದ್ದಾನೆ. ಕಾಲೇಜಿನ ಹಿಂಭಾಗದ ಜಿಮ್‌ವೊಂದರ ಬಳಿ ಯೋಗೀಶ್ ಬಂದಾಗ, ಏಳೆಂಟು ಮಂದಿ ವಿದ್ಯಾರ್ಥಿಗಳು ಅಲ್ಲಿ ಸೇರಿದ್ದರು. ಈ ವೇಳೆ ಯೋಗೀಶ್ ಸ್ನೇಹಿತರು ಹಾಗೂ ಮತ್ತೊಂದು ಗುಂಪಿನ ನಡುವೆ ಗಲಾಟೆ ನಡೆದಿದೆ ಎನ್ನಲಾಗಿದೆ. ಗಲಾಟೆ ನಡೆಯುತ್ತಿದ್ದಾಗ ಗುಂಪಿನಲ್ಲಿದ್ದ ವಿದ್ಯಾರ್ಥಿಯೊಬ್ಬ ಚಾಕುವಿನಿಂದ ಯೋಗೀಶ್ ಎದೆಗೆ ಇರಿದಿದ್ದಾನೆ. ತೀವ್ರವಾಗಿ ಗಾಯಗೊಂಡ ಅವರನ್ನು ಸ್ನೇಹಿತರು ಬೈಕ್‌ನಲ್ಲಿ ಖಾಸಗಿ ಆಸ್ಪತ್ರೆಗೆ ಕರೆದೊಯ್ದರಾದರೂ, ಅಧಿಕ ರಕ್ತಸ್ರಾವದಿಂದ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಯೋಗೀಶ್ ಉತ್ತಮ ವಿದ್ಯಾರ್ಥಿಯಾಗಿದ್ದು, ನೃತ್ಯದಲ್ಲೂ ಆಸಕ್ತಿ ಹೊಂದಿದ್ದರು ಎಂದು ತಿಳಿದುಬಂದಿದೆ. ಘಟನೆ ಕುರಿತು ಅನ್ನಪೂರ್ಣೇಶ್ವರಿ ನಗರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಆರೋಪಿಗಳ ಪತ್ತೆಗೆ ತನಿಖೆ ಮುಂದುವರಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಸ್ಥಳದಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಯೋಗೀಶ್‌ನ ಸ್ನೇಹಿತರಿಂದ ಮಾಹಿತಿ ಕಲೆಹಾಕುತ್ತಿದ್ದಾರೆ. ಗಲಾಟೆಗೆ ನಿಖರ ಕಾರಣವೇನು, ಕೃತ್ಯದಲ್ಲಿ ಎಷ್ಟು ಮಂದಿ ಭಾಗಿಯಾಗಿದ್ದರು ಹಾಗೂ ಚಾಕುವಿನಿಂದ ಇರಿದ ವಿದ್ಯಾರ್ಥಿ ಯಾರು ಎಂಬುದರ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# 'ದಾಖಲೆ ಓದಲು ಬರಲ್ಲ, ವ್ಯರ್ಥ ಸಮರ್ಥನೆ'

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕೇಳಿಬಂದಿರುವ ಅಕ್ರಮಗಳ ಆರೋಪಗಳನ್ನು ಸಮರ್ಥಿಸಿಕೊಳ್ಳುತ್ತಿರುವ ರಾಜ್ಯ ಸಚಿವರ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳು ಸ್ಪಷ್ಟವಾಗಿದ್ದರೂ ಸಚಿವರು ವ್ಯರ್ಥ ಸಮರ್ಥನೆಗೆ ಮುಂದಾಗಿದ್ದಾರೆ ಎಂದು ಅವರು ಟೀಕಿಸಿದ್ದಾರೆ.

ಮಂಗಳವಾರ ನಡೆದ ತಮ್ಮ ಪತ್ರಿಕಾಗೋಷ್ಠಿಯ ವಿಡಿಯೋ ತುಣುಕನ್ನು 'ಎಕ್ಸ್'ನಲ್ಲಿ ಹಂಚಿಕೊಂಡಿರುವ ಕುಮಾರಸ್ವಾಮಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ವತಃ ಆರೋಪಿತ ಅಕ್ರಮಗಳಲ್ಲಿ ಭಾಗಿಯಾಗಿದ್ದು, ತಮ್ಮ ಕುಟುಂಬದವರನ್ನೂ ಅದರಲ್ಲಿ ಭಾಗಿಯಾಗಿಸಿರುವುದು ದಾಖಲೆಗಳಿಂದ ರುಜುವಾತಾಗಿದೆ ಎಂದು ಆರೋಪಿಸಿದರು.



'ಕೆಲ ಸೈಡ್ ವಿಂಗ್ ನಾಲಿಗೆಗಳು ವ್ಯರ್ಥ ಸಮರ್ಥನೆಗೆ ಇಳಿದಿವೆ. ಪಾಪ, ಅವುಗಳಿಗೆ ವಿದ್ಯೆ–ಬುದ್ಧಿ ಗೊತ್ತಿಲ್ಲ. ದಾಖಲೆಗಳನ್ನು ಓದಲು ಬರುವುದಿಲ್ಲ. ಆದರೂ ಸಚಿವರಾಗಿದ್ದಾರೆ' ಎಂದು ಅವರು ಟೀಕಿಸಿದರು.

ಶಿವಕುಮಾರ್ ಅವರು ನಗರಾಭಿವೃದ್ಧಿ ಸಚಿವರಾಗಿದ್ದ ಅವಧಿ ಹಾಗೂ ಬೆಂಗಳೂರು–ಮೈಸೂರು ಮೂಲಸೌಕರ್ಯ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ (BMICPA) ಅಧ್ಯಕ್ಷರಾಗಿದ್ದ ಸಂದರ್ಭವನ್ನು ಉಲ್ಲೇಖಿಸಿದ ಕುಮಾರಸ್ವಾಮಿ, ಆ ಅವಧಿಯಲ್ಲಿ ನಡೆದಿವೆ ಎನ್ನಲಾದ ಅಕ್ರಮಗಳನ್ನು ಅಧಿಕೃತ ದಾಖಲೆಗಳೇ ತೋರಿಸುತ್ತವೆ ಎಂದು ಪ್ರತಿಪಾದಿಸಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಜೆ.ಎಚ್. ಪಟೇಲ್ ಅವರ ಆಡಳಿತದ ಸಂದರ್ಭಗಳನ್ನು ಪ್ರಸ್ತಾಪಿಸಿದ ಅವರು, ನಂತರದ ಸರ್ಕಾರದಲ್ಲಿ ಡಿ.ಕೆ. ಶಿವಕುಮಾರ್ ನಗರಾಭಿವೃದ್ಧಿ ಸಚಿವರಾಗಿ ಮತ್ತು BMICPA ಅಧ್ಯಕ್ಷರಾಗಿ ಕೈಗೊಂಡ ಕ್ರಮಗಳ ಕುರಿತು ದಾಖಲೆಗಳು ಪ್ರಶ್ನೆಗಳನ್ನು ಎತ್ತುತ್ತವೆ ಎಂದು ಹೇಳಿದರು.

## 'ನಮ್ಮದೂ ಕೆಜಿಎಫ್-2 ಬರುತ್ತೆ, ಸಮಯ ಬಂದಾಗ ಬಿಡುಗಡೆ ಮಾಡ್ತೀವಿ'

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಹಲವು ಜ್ವಲಂತ ಸಮಸ್ಯೆಗಳಿದ್ದು, ಅವುಗಳ ಪರಿಹಾರದತ್ತ ಗಮನಹರಿಸಬೇಕಾಗಿದೆ. ಆದರೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಆರೋಪ, ದಾಖಲೆ ಹಾಗೂ ಬ್ಲ್ಯಾಕ್‌ಮೇಲ್ ರಾಜಕಾರಣದಲ್ಲಿ ತೊಡಗಿದ್ದಾರೆ ಎಂದು ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ ಆರೋಪಿಸಿದರು.



ಕುಮಾರಸ್ವಾಮಿ ಅವರ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, "ನಮ್ಮದೂ ಕೆಜಿಎಫ್–2 ಬರುತ್ತೆ. ಸಮಯ ಬಂದಾಗ ಬಿಡುಗಡೆ ಮಾಡುತ್ತೇವೆ. ಅವರಂತೆ ಬ್ಲ್ಯಾಕ್‌ಮೇಲ್ ಮಾಡಿ ಹಫ್ತಾ ವಸೂಲಿ ಮಾಡುವ ಅಗತ್ಯ ನಮಗಿಲ್ಲ" ಎಂದು ತೀವ್ರವಾಗಿ ಟೀಕಿಸಿದರು.

ಕೇಂದ್ರದಲ್ಲಿ ಸಚಿವರಾಗಿರುವ ಕುಮಾರಸ್ವಾಮಿ ಅವರು ರಾಜ್ಯದ ರೈತರ ಪರ ನಿಜವಾಗಿಯೂ ಕಾಳಜಿ ಹೊಂದಿದ್ದರೆ, ಕೇಂದ್ರದಿಂದ ರೈತರಿಗೆ ಎಕರೆಗೆ ₹50 ಸಾವಿರ ಪರಿಹಾರ ಕೊಡಿಸಲಿ. ಆಗ ಅವರನ್ನು ರೈತ ನಾಯಕ ಎಂದು ಒಪ್ಪಿಕೊಳ್ಳುತ್ತೇವೆ ಎಂದು ಬಾಲಕೃಷ್ಣ ಸವಾಲು ಹಾಕಿದರು.

"ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗಿದ್ದೀರಿ. ಅಲ್ಲಿನ ಜವಾಬ್ದಾರಿ ನಿರ್ವಹಿಸಿ. ರಾಜ್ಯ ಸರ್ಕಾರದ ವಿರುದ್ಧ ಬೆಳಗ್ಗೆಯೇ ಆರೋಪ ಮಾಡುವ ಬದಲು ಕೇಂದ್ರದಿಂದ ರಾಜ್ಯಕ್ಕೆ ಅಗತ್ಯ ನೆರವು ಕೊಡಿಸುವ ಕೆಲಸ ಮಾಡಿ" ಎಂದು ಅವರು ಹೇಳಿದರು.

ಕುಮಾರಸ್ವಾಮಿ ಅವರ ಕುಟುಂಬಕ್ಕೆ ಸಂಬಂಧಿಸಿದ ಆಸ್ತಿ ಹಾಗೂ ಆದಾಯದ ಕುರಿತು ಹಲವು ಪ್ರಶ್ನೆಗಳಿವೆ ಎಂದು ಆರೋಪಿಸಿದ ಬಾಲಕೃಷ್ಣ, ಅವರ ಸಹೋದರರ ಆಸ್ತಿ ಏರಿಕೆಯ ಬಗ್ಗೆಯೂ ತನಿಖೆ ನಡೆಯಲಿ. ನಂತರ ನಮ್ಮ ವಿರುದ್ಧದ ಆರೋಪಗಳ ಬಗ್ಗೆ ತನಿಖೆ ನಡೆಸಲಿ ಎಂದು ಹೇಳಿದರು. ಐಟಿ ನೋಟಿಸ್‌ಗಳ ವಿಚಾರದಲ್ಲಿಯೂ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಐಟಿ ಮತ್ತು ಇಡಿ ಅಧಿಕಾರಿಗಳು ಸುಮ್ಮನೆ ನೋಟಿಸ್ ನೀಡುವುದಿಲ್ಲ" ಎಂದು ಆರೋಪಿಸಿದರು. ಈ ಆರೋಪಗಳಿಗೆ ಸಂಬಂಧಿಸಿದಂತೆ ಕುಮಾರಸ್ವಾಮಿ ಅವರು ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸನಿ ವಾಹಿನಿ

ನೀವು ಎಚ್ಚರವಾದಾಗ ನಿಮ್ಮನ್ನು ಸಕಾರಾತ್ಮಕತೆಯಿಂದ ತುಂಬಿಕೊಳ್ಳಿ, ಮತ್ತು ನಿಮ್ಮ ಜೀವನವು ಸರಿಯಾದ ದಿಕ್ಕಿನಲ್ಲಿ ತಿರುಗುತ್ತದೆ.

### ದಿನ ಪಂಚಾಂಗ

ಅಕ್ಟೋಬರ್, 01-2026, ಬುಧವಾರ ವರ್ಷ ಋತು,
ಭಾದ್ರಪದ ಮಾಸ, ಬಹುಳ ಪಕ್ಷ
ಪಂಚಮಿ ತಿಥಿ ಮ.2:42
ಕೃತ್ತಿಕ ನಕ್ಷತ್ರ ಬೆ.9:01
ರಾಹುಕಾಲ ಮ 1:39-3:09
ವಿಶ್ವಕರ್ಮ ಪೂಜೆ, ಅಂತರರಾಷ್ಟ್ರೀಯ ಹಿರಿಯರ ದಿನ, ಕೊಪ್ಪಳ । ಉಪ್ಪಳ ಹನುಮಂತಾವಧೂತ ಆರಾಧನೆ, ತಾಳಕೋಟೆ ಖಾಸಗತೇಶ್ವರ ರಥ

# ಚಾಮರಾಜನಗರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಸಂಕಲ್ಪ: ಡಿಕೆಶಿ

**ಚಾಮರಾಜನಗರ ಜಿಲ್ಲೆಯ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಕೊಳ್ಳೇಗಾಲ-ಹನೂರು ಸೇರಿದಂತೆ ಜಿಲ್ಲೆಯಾದ್ಯಂತ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ನೀರಾವರಿ, ರೇಷ್ಮೆ, ಕೈಮಗ್ಗ ಹಾಗೂ ಜನಪರ ಯೋಜನೆಗಳಿಗೆ ಆದ್ಯತೆ ನೀಡಲಾಗಿದ್ದು, 2028ರಲ್ಲೂ ಗ್ಯಾರಂಟಿ ಯೋಜನೆಗಳು ಮುಂದುವರಿಯಲಿವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.**

● ವಿಕ್ರಮ ವಾಹಿನಿ । ಚಾಮರಾಜನಗರ

ಚಾಮರಾಜನಗರ ಜಿಲ್ಲೆಯ ಜನರಿಗೆ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಶಕ್ತಿ ತುಂಬುವ ಮೂಲಕ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಕೊಳ್ಳೇಗಾಲ-ಹನೂರು ಕ್ಷೇತ್ರಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಜಿಲ್ಲೆಗೆ ಈ ಹಿಂದೆ ಸಚಿವ ಸಂಪುಟ ಸಭೆಯ ಮೂಲಕ ಸುಮಾರು 3,000 ಕೋಟಿ ಮೊತ್ತದ ಕಾಮಗಾರಿಗಳನ್ನು ಮಂಜೂರು ಮಾಡಲಾಗಿತ್ತು. ಇದೀಗ ಸುಮಾರು 25ಕ್ಕೂ ಹೆಚ್ಚು ಹೊಸ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಲಾಗಿದೆ ಎಂದರು.

**ಕೊಳ್ಳೇಗಾಲಕ್ಕೆ ಅಭಿವೃದ್ಧಿಯ ಕಾಲ:** ಕೊಳ್ಳೇಗಾಲಕ್ಕೆ ಉತ್ತಮ ಕಾಲ ಆರಂಭವಾಗಿದ್ದು, ಹನೂರಿಗೂ ಅಭಿವೃದ್ಧಿ ಹರಿಯುತ್ತಿದೆ. ರೇಷ್ಮೆ ಈ ಭಾಗದ ಪಾರಂಪರಿಕ ಉದ್ಯಮವಾಗಿದ್ದು, ರೇಷ್ಮೆ ಉತ್ಪಾದನೆ ಹಾಗೂ ಕೈಮಗ್ಗ ಕ್ಷೇತ್ರಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೈಮಗ್ಗ ಉದ್ಯಮಕ್ಕೆ ಕೈಗಾರಿಕಾ ಸ್ಥಾನಮಾನ ನೀಡುವ ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪಿದಾಗ ಮಾತ್ರ ನಿಜವಾದ ಬದಲಾವಣೆ ಸಾಧ್ಯ. ಸೇವೆಯೇ ಧರ್ಮ, ಅಭಿವೃದ್ಧಿಯೇ ಗುರಿ.



ಕೇವಲ ಮಾತಿನಿಂದ ಅಭಿವೃದ್ಧಿ ಸಾಧ್ಯವಿಲ್ಲ; ನಿರಂತರ ಶ್ರಮ ಮತ್ತು ಶಿಸ್ತಿನಿಂದ ಜನರ ಬದುಕಿನಲ್ಲಿ ಬದಲಾವಣೆ ತರಬೇಕು ಎಂದರು.

**2028ರಲ್ಲೂ ಗ್ಯಾರಂಟಿ ಮುಂದುವರಿಕೆ**

ಮುಂದಿನ ದಿನಗಳಲ್ಲೂ ಸರ್ಕಾರದ ಅಭಿವೃದ್ಧಿ ಕಾರ್ಯಗಳು ಮುಂದುವರಿಯಲಿದ್ದು, 2028ರಲ್ಲೂ ಗ್ಯಾರಂಟಿ ಯೋಜನೆಗಳು ಮುಂದುವರಿಯಲಿವೆ ಎಂದು ಮುಖ್ಯಮಂತ್ರಿ ಹೇಳಿದರು. ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಸೇರಿದಂತೆ ಜನಪರ ಕಾರ್ಯಕ್ರಮಗಳನ್ನು ಸರ್ಕಾರ ಜಾರಿಗೊಳಿಸಿದೆ. ಪ್ರತಿ ಜಿಲ್ಲೆಯಲ್ಲಿ 50 ಸಾವಿರ ನಿವೇಶನಗಳನ್ನು ಹಂಚಿಕೆ ಮಾಡುವ ಗುರಿಯನ್ನೂ ಹೊಂದಲಾಗಿದೆ ಎಂದರು.

**ವಿವಿಗೆ ಅಂಬೇಡ್ಕರ್ ಹೆಸರು:** ಚಾಮರಾಜನಗರ ವಿಶ್ವವಿದ್ಯಾಲಯಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡುವ ಬೇಡಿಕೆ ಬಂದಿದ್ದು, ಈ ಕುರಿತು ಸಚಿವ ಸಂಪುಟದಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಶಿವಕುಮಾರ್ ಹೇಳಿದರು.

ಜಿಲ್ಲೆಯಲ್ಲಿ ನೀರಾವರಿ ಅಭಿವೃದ್ಧಿಗೂ ಆದ್ಯತೆ ನೀಡಲಾಗಿದೆ. ಸುವರ್ಣಾವತಿ ನೀರಾವರಿ ಯೋಜನೆ ವ್ಯಾಪ್ತಿಯ ಸರಣಿ ಕೆರೆಗಳ ಸಮಗ್ರ ಅಭಿವೃದ್ಧಿಗೆ 120 ಕೋಟಿ ಮೊತ್ತದ ಕಾಮಗಾರಿಗೆ ಕಾರ್ಯಾದೇಶ ನೀಡಲಾಗಿದೆ. ಹನೂರಿನಲ್ಲಿ ಅಂತರ್ಜಲ ಅಭಿವೃದ್ಧಿ, ಚಾಮರಾಜನಗರ ಸಮೀಪ ಕಾಲುವೆ ಕಾಮಗಾರಿ ಹಾಗೂ ಗುಂಡ್ಲುಪೇಟೆ ತಾಲ್ಲೂಕಿನಲ್ಲಿ 450 ಕೋಟಿ ವೆಚ್ಚದ ನೀರಾವರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಒಟ್ಟಾರೆ ಸುಮಾರು 1,000 ಕೋಟಿ ಮೊತ್ತದ ನೀರಾವರಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

**'ಅಧಿಕಾರಕ್ಕೆ ಬರುವ ಕನಸು ಹಗಲುಕನಸು'**

ಕೆಲವು ಪಕ್ಷಗಳು ಮತ್ತೆ ಅಧಿಕಾರಕ್ಕೆ ಬರುವ ಕನಸು ಕಾಣುತ್ತಿವೆ. ಆದರೆ ಅದು ಹಗಲುಕನಸು ಎಂದು ಶಿವಕುಮಾರ್ ಟೀಕಿಸಿದರು. ರಾಜ್ಯವು ಹೊಸ ರೂಪದತ್ತ ಹೆಜ್ಜೆ ಇಡುತ್ತಿದ್ದು, ಜನರ ಜೀವನಮಟ್ಟ ಸುಧಾರಿಸುವ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದರು.

ಬಹುದಿನಗಳ ಬೇಡಿಕೆಯಾಗಿದ್ದ ಅಂಬೇಡ್ಕರ್ ಭವನವನ್ನು ಉದ್ಘಾಟಿಸಲಾಗಿದೆ. ಜಿಲ್ಲೆಯ ಅಭಿವೃದ್ಧಿಗೆ ಮಾಜಿ ಸಚಿವರಾದ ಕೆ.ವೆಂಕಟೇಶ್, ಮಹದೇವಪ್ಪ ಸೇರಿದಂತೆ ಜನಪ್ರತಿನಿಧಿಗಳು ನೀಡಿರುವ ಕೊಡುಗೆಯನ್ನು ಸ್ಮರಿಸಿದ ಅವರು, ಚಾಮರಾಜನಗರದ ಸಮಗ್ರ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಶ್ರಮಿಸಲಿದೆ ಎಂದು ಹೇಳಿದರು.

### ಆರೋಗ್ಯ

## ವಿಶ್ವದಲ್ಲಿ ವರ್ಷಕ್ಕೆ 2.73 ಲಕ್ಷ ಮಕ್ಕಳಿಗೆ ಕ್ಯಾನ್ಸರ್



● ವಿಕ್ರಮ ವಾಹಿನಿ । ಬೆಂಗಳೂರು

ವಿಶ್ವದಲ್ಲಿ ಪ್ರತಿವರ್ಷ ಸುಮಾರು 2.73 ಲಕ್ಷ ಮಕ್ಕಳಲ್ಲಿ ಕ್ಯಾನ್ಸರ್ ಪತ್ತೆಯಾಗುತ್ತಿದ್ದು, ಭಾರತದಲ್ಲಿ ಈ ಸಂಖ್ಯೆ ಸುಮಾರು 35,240ರಷ್ಟಿದೆ. ಕರ್ನಾಟಕದಲ್ಲಿ 2025ರಲ್ಲಿ 1,882 ಬಾಲ್ಯ ಕ್ಯಾನ್ಸರ್ ಪ್ರಕರಣಗಳು ದಾಖಲಾಗಿರುವುದಾಗಿ ಅಂದಾಜಿಸಲಾಗಿದೆ ಎಂದು ಕಿದ್ವಾಯಿ ಮೆಮೋರಿಯಲ್ ಇನ್‌ಸ್ಟಿಟ್ಯೂಟ್ ಆಫ್ ಆಂಕಾಲಜಿ ತಿಳಿಸಿದೆ.

2026ರ ಬಾಲ್ಯ ಕ್ಯಾನ್ಸರ್ ಜಾಗೃತಿ ಅಭಿಯಾನದ ಅಂಗವಾಗಿ ಸಂಸ್ಥೆ ಬಿಡುಗಡೆ ಮಾಡಿರುವ ಮಾಹಿತಿಯ ಪ್ರಕಾರ, ವಿಶ್ವದ ಒಟ್ಟು ಕ್ಯಾನ್ಸರ್ ಪ್ರಕರಣಗಳಲ್ಲಿ ಶೇ.1.5ರಷ್ಟು ಮಕ್ಕಳ ಕ್ಯಾನ್ಸರ್ ಪ್ರಕರಣಗಳಾಗಿವೆ. ಭಾರತದಲ್ಲಿ ಒಟ್ಟು ಕ್ಯಾನ್ಸರ್ ಪ್ರಕರಣಗಳಲ್ಲಿ ಬಾಲ್ಯ ಕ್ಯಾನ್ಸರ್ ಪ್ರಮಾಣ ಶೇ.2.5ರಷ್ಟಿದ್ದು, ವರ್ಷಕ್ಕೆ ಸುಮಾರು 16,850 ಮಕ್ಕಳು ಕ್ಯಾನ್ಸರ್‌ನಿಂದ ಸಾವನ್ನಪ್ಪುತ್ತಿದ್ದಾರೆ ಎಂದು ಅಂದಾಜಿಸಲಾಗಿದೆ.

**ಲ್ಯುಕೇಮಿಯಾ ಹೆಚ್ಚು:** ಮಕ್ಕಳಲ್ಲಿ ಸಾಮಾನ್ಯವಾಗಿ ಕಂಡುಬರುವ ಕ್ಯಾನ್ಸರ್‌ಗಳಲ್ಲಿ ಲ್ಯುಕೇಮಿಯಾ ಪ್ರಮುಖವಾಗಿದೆ. ಬಾಲಕರ ಕ್ಯಾನ್ಸರ್ ಪ್ರಕರಣಗಳಲ್ಲಿ ಶೇ.40.3 ಹಾಗೂ ಬಾಲಕಿಯರ ಪ್ರಕರಣಗಳಲ್ಲಿ ಶೇ.34.3ರಷ್ಟು ಲ್ಯುಕೇಮಿಯಾ ಪ್ರಕರಣಗಳಾಗಿವೆ. ಮೆದುಳು ಮತ್ತು ನರಮಂಡಲಕ್ಕೆ ಸಂಬಂಧಿಸಿದ ಗಡ್ಡೆಗಳೂ ಮಕ್ಕಳಲ್ಲಿ ಪ್ರಮುಖ ಕ್ಯಾನ್ಸರ್‌ಗಳಾಗಿವೆ ಎಂದು ಸಂಸ್ಥೆ ತಿಳಿಸಿದೆ.

ಕರ್ನಾಟಕದಲ್ಲಿ 2025ರಲ್ಲಿ ಬಾಲ್ಯ ಕ್ಯಾನ್ಸರ್‌ನಿಂದ 312 ಸಾವುಗಳು ಸಂಭವಿಸಿರುವುದಾಗಿ ಅಂದಾಜಿಸಲಾಗಿದೆ. ಬೆಂಗಳೂರಿನಲ್ಲಿ ಇದೇ ಅವಧಿಯಲ್ಲಿ 349 ಪ್ರಕರಣಗಳು ಹಾಗೂ 56 ಸಾವುಗಳು ಸಂಭವಿಸಿರುವುದಾಗಿ ಸಂಸ್ಥೆ ಮಾಹಿತಿ ನೀಡಿದೆ. ಕಿದ್ವಾಯಿ ಆಸ್ಪತ್ರೆಯಲ್ಲಿ 2024ರಲ್ಲಿ 0-19 ವರ್ಷದೊಳಗಿನವರಲ್ಲಿ 588 ಹೊಸ ಕ್ಯಾನ್ಸರ್ ಪ್ರಕರಣಗಳು ದಾಖಲಾಗಿದ್ದವು.

**ಆರಂಭಿಕ ಪತ್ತೆ ಮುಖ್ಯ:** ಮಕ್ಕಳಲ್ಲಿ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಅತ್ಯಂತ ಮುಖ್ಯ. ದೇಹದಲ್ಲಿ ಗಡ್ಡೆ, ನಿರಂತರ ಜ್ವರ, ಚರ್ಮ ಬಿಳಿಯಾಗುವುದು, ಸುಲಭವಾಗಿ ರಕ್ತಸ್ರಾವ, ತಲೆನೋವು, ವಾಂತಿ, ತೂಕ ಇಳಿಕೆ ಹಾಗೂ ನಿರಂತರ ಸುಸ್ತು ಕಂಡುಬಂದರೆ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸಂಸ್ಥೆ ಸಲಹೆ ನೀಡಿದೆ.

ಕಣ್ಣಿನಲ್ಲಿ ಬಿಳಿ ಪ್ರತಿಫಲನ ಕಾಣಿಸಿಕೊಂಡರೂ ನಿರ್ಲಕ್ಷಿಸದೆ ತಕ್ಷಣ ವೈದ್ಯಕೀಯ ಸಲಹೆ ಪಡೆಯಬೇಕು. ಆರಂಭಿಕ ಪತ್ತೆ ಹಾಗೂ ಸಮಯೋಚಿತ ಚಿಕಿತ್ಸೆ ಮಕ್ಕಳ ಗುಣಮುಖತೆಯ ಸಾಧ್ಯತೆಯನ್ನು ಹೆಚ್ಚಿಸಬಹುದು ಎಂದು ಕಿದ್ವಾಯಿ ಸಂಸ್ಥೆ ತಿಳಿಸಿದೆ.

ಮಕ್ಕಳಲ್ಲಿ ಕ್ಯಾನ್ಸರ್ ಕಾಣಿಸಿಕೊಳ್ಳಲು ಒಂದೇ ಕಾರಣವನ್ನು ನಿಖರವಾಗಿ ಗುರುತಿಸಲು ಸಾಧ್ಯವಾಗುವುದಿಲ್ಲ. ಕೆಲವು ಪ್ರಕರಣಗಳಲ್ಲಿ ಆನುವಂಶಿಕ ಹಾಗೂ ಇತರ ಜೈವಿಕ ಅಂಶಗಳು ಪಾತ್ರವಹಿಸಬಹುದು. ಆದ್ದರಿಂದ ಮಕ್ಕಳಲ್ಲಿ ಕಾಣಿಸಿಕೊಳ್ಳುವ ಅಸಾಮಾನ್ಯ ಲಕ್ಷಣಗಳನ್ನು ನಿರ್ಲಕ್ಷಿಸದೆ ವೈದ್ಯರ ಸಲಹೆ ಪಡೆಯುವುದು ಅಗತ್ಯ ಎಂದು ತಜ್ಞರು ಸಲಹೆ ನೀಡಿದ್ದಾರೆ.

ಬಾಲ್ಯ ಕ್ಯಾನ್ಸರ್ ಚಿಕಿತ್ಸೆಯಲ್ಲಿ ಆರಂಭಿಕ ಪತ್ತೆ ಜತೆಗೆ ಸೂಕ್ತ ಚಿಕಿತ್ಸಾ ಸೌಲಭ್ಯಗಳು, ನಿರಂತರ ವೈದ್ಯಕೀಯ ಮೇಲ್ವಿಚಾರಣೆ ಹಾಗೂ ಪೌಷ್ಟಿಕ ಆಹಾರವೂ ಮಹತ್ವದ ಪಾತ್ರ ವಹಿಸುತ್ತವೆ. ಬಾಲ್ಯ ಕ್ಯಾನ್ಸರ್ ಕುರಿತು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ. ಪೋಷಕರು ಮಕ್ಕಳ ಆರೋಗ್ಯದಲ್ಲಿ ಕಂಡುಬರುವ ನಿರಂತರ ಅಥವಾ ಅಸಾಮಾನ್ಯ ಬದಲಾವಣೆಗಳ ಬಗ್ಗೆ ಎಚ್ಚರಿಕೆ ವಹಿಸಿ, ಅಗತ್ಯವಿದ್ದಲ್ಲಿ ತಜ್ಞ ವೈದ್ಯರನ್ನು ಸಂಪರ್ಕಿಸುವ ಮೂಲಕ ಆರಂಭಿಕ ಹಂತದಲ್ಲೇ ಸಮಸ್ಯೆ ಗುರುತಿಸಲು ಮುಂದಾಗಬೇಕು ಎಂದು ಕಿದ್ವಾಯಿ ಸಂಸ್ಥೆ ಕರೆ ನೀಡಿದೆ.

## ರೂ 2,700ರ ಕ್ಯಾನ್ಸರ್ ಔಷಧಿಗೆ ರೂ 27,000 ಎಂಆರ್‌ಪಿ!

● ವಿಕ್ರಮ ವಾಹಿನಿ । ನವದೆಹಲಿ

ಚಿಲ್ಲರೆ ವ್ಯಾಪಾರಿಗೆ ರೂ 2,700ಕ್ಕೆ ದೊರೆಯುವ ಕ್ಯಾನ್ಸರ್ ಔಷಧಿಗೆ ರೂ 27,000 ಎಂಆರ್‌ಪಿ ನಿಗದಿಪಡಿಸಿರುವುದನ್ನು ಸುಪ್ರೀಂ ಕೋರ್ಟ್ ತೀವ್ರವಾಗಿ ಪ್ರಶ್ನಿಸಿದೆ. ರೂ 3,520ರ ಇಂಜೆಕ್ಷನ್‌ಗೆ ರೂ 22,347 ಬೆಲೆ ನಿಗದಿಪಡಿಸಿರುವ ಉದಾಹರಣೆಯನ್ನೂ ಉಲ್ಲೇಖಿಸಿದ ನ್ಯಾಯಪೀಠ, ಖರೀದಿ ದರಕ್ಕಿಂತ ಹಲವು ಪಟ್ಟು ಹೆಚ್ಚಿನ ಬೆಲೆ ನಿಗದಿಪಡಿಸುವುದರಿಂದ ಲಾಭ ಪಡೆಯುತ್ತಿರುವವರು ಯಾರು ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿತು.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ಖಾಸಗಿ ಆಸ್ಪತ್ರೆಗಳು ತಮ್ಮದೇ ಔಷಧ ಮಳಿಗೆಗಳಿಂದ ಔಷಧ ಖರೀದಿಸುವಂತೆ ರೋಗಿಗಳನ್ನು ಒತ್ತಾಯಿಸುತ್ತಿರುವ ಬಗ್ಗೆಯೂ ಅಸಮಾಧಾನ ವ್ಯಕ್ತಪಡಿಸಿತು. ಹೊರಗಡೆ ಕಡಿಮೆ ದರಕ್ಕೆ ದೊರೆಯುವ ಔಷಧಗಳನ್ನು ಆಸ್ಪತ್ರೆಗಳಲ್ಲಿ ದುಬಾರಿ ಬೆಲೆಗೆ ಮಾರಾಟ ಮಾಡುವುದಕ್ಕೆ ಕಡಿವಾಣ ಹಾಕಬೇಕು ಎಂದು ತಿಳಿಸಿತು. ಎಲ್ಲ ಔಷಧಗಳಿಗೂ ಬೆಲೆ ನಿಯಂತ್ರಣ?: ಔಷಧ ಬೆಲೆ ನಿಯಂತ್ರಣ ಆದೇಶದಡಿ ಎಲ್ಲ ಔಷಧಗಳಿಗೂ ಗರಿಷ್ಠ ಲಾಭಾಂಶ ಮಿತಿ ವಿಧಿಸಲು ಸಾಧ್ಯವೇ ಎಂದು ಪೀಠ ಪ್ರಶ್ನಿಸಿತು. ಶೇ.80ಕ್ಕೂ ಹೆಚ್ಚು ಔಷಧಗಳು ಬೆಲೆ ನಿಯಂತ್ರಣದ ವ್ಯಾಪ್ತಿಯಿಂದ ಹೊರಗಿರುವುದನ್ನು ಉಲ್ಲೇಖಿಸಿ, ಔಷಧ ಹಾಗೂ ವೈದ್ಯಕೀಯ ಸಾಧನಗಳ ಬೆಲೆ ನಿಯಂತ್ರಣದ ಕುರಿತು ಸಮಗ್ರ ಕ್ರಮದ ಅಗತ್ಯವಿದೆ ಎಂದು ಹೇಳಿತು.

## ಮಧುಮೇಹ ಪಾದ ನಿರ್ವಹಣೆ ಕಾರ್ಯಾಗಾರ ಸಿಟಿ ಹೆಲ್ತ್ ಕೇರ್-ಜೈನ್ ಆಸ್ಪತ್ರೆ ಪ್ರಯೋಗ

● ವಿಕ್ರಮ ವಾಹಿನಿ । ಕೋಲಾರ

ಇತ್ತೀಚಿನ ದಿನಗಳಲ್ಲಿ ಮಧುಮೇಹ ಪೀಡಿತರಲ್ಲಿ ಹೆಚ್ಚುತ್ತಿರುವ ಪಾದಗಳ ಸಮಸ್ಯೆ ಮತ್ತು ನಿರ್ವಹಣೆ ಕುರಿತು ಅಧ್ಯಯನ ಕಾರ್ಯಾಗಾರ ಒಂದು ಅಕ್ಟೋಬರ್ ಒಂದರಂದು ಬೆಂಗಳೂರಿನಲ್ಲಿ ನಡೆಯಲಿದೆ.



ನಗರದ ಸಿಟಿ ಹೆಲ್ತ್ ಕೇರ್ ಮತ್ತು ಬೆಂಗಳೂರು ಜೈನ್ ಆಸ್ಪತ್ರೆ ಸಹಯೋಗದಲ್ಲಿ ಗುರುವಾರ ಸಂಜೆ ಎರಡು ಗಂಟೆಯಿಂದ ಐದು ಗಂಟೆವರೆಗೂ ಬೆಂಗಳೂರು ವಸಂತನಗರದ ಜೈನ ಆಸ್ಪತ್ರೆಯಲ್ಲಿ ಈ ಕಾರ್ಯಾಗಾರ ನಡೆಯಲಿದೆ.

ಮಧುಮೇಹ ತಜ್ಞರು ಮತ್ತು ರೋಗ ನಿರ್ವಹಣೆಯಲ್ಲಿ ತೊಡಗುವ ವೈದ್ಯಕೀಯ ಸಿಬ್ಬಂದಿಗೆ ಅರಿವು ಮೂಡಿಸುವ ಸಲುವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಿಟಿ ಹೆಲ್ತ್ ಕೇರ್ ಮುಖ್ಯಸ್ಥ ಡಾ.ಬಿ.ಆರ್. ಶ್ರೀನಿವಾಸ್ ತಿಳಿಸಿದ್ದಾರೆ.

ಸಂಕೀರ್ಣ ಮಧುಮೇಹ ಪಾದದ ರೋಗಿಗಳಲ್ಲಿ ಸುರಕ್ಷಿತ, ಹೆಚ್ಚು ರಚನಾತ್ಮಕ ಇನ್ಸುಲಿನ್ ನಿರ್ಧಾರಗಳನ್ನು ತೆಗೆದುಕೊಳ್ಳಲು ಪ್ರಾಯೋಗಿಕ ಚೌಕಟ್ಟನ್ನು ದೊರಕಿಸುವ ಕಾರ್ಯವಿಧಾನ ಕುರಿತು ವಿವಿಧ ಮಧುಮೇಹ ತಜ್ಞರು ಬೆಳಕು ಚೆಲ್ಲಲಿದ್ದಾರೆ.

ದೀರ್ಘಕಾಲದ ಮಧುಮೇಹ ಪಾದದ ಹುಣ್ಣುಗಳಿಗೆ ಮ್ಯಾಗೊಟ್ ಡಿಬ್ರಿಡ್ಮೆಂಟ್ ಥೆರಪಿ ಕುರಿತು ಪ್ರಾಯೋಗಿಕ ಕಾರ್ಯಾಗಾರ, ರೋಗಿಯ ಮತ್ತು ಗಾಯದ ಆಯ್ಕೆ, ಸೂಚನೆಗಳು ಮತ್ತು ವಿರೋಧಾಭಾಸಗಳು ಮತ್ತು ಸ್ಮಾರ್ಟ್ JArnS ಪ್ರೋಟೋಕಾಲ್ ಅನ್ನು ಕಾರ್ಯಾಗಾರದಲ್ಲಿ ಚರ್ಚಿಸಲಾಗುವುದು ಎಂದು ಡಾ.ಶ್ರೀನಿವಾಸ್ ವಿವರಿಸಿದ್ದಾರೆ.

ಗರಿಷ್ಠ 48 ಗಂಟೆಗಳಲ್ಲಿ ಗಾಯಗಳನ್ನು ಸಿದ್ಧಪಡಿಸುವುದು ಮತ್ತು ನಿರ್ಣಯಿಸುವುದು, ಬರಡಾದ ಮ್ಯಾಗೊಟ್ ಮೊಟ್ಟೆಗಳನ್ನು ನಿರ್ವಹಿಸುವುದು, ಡ್ರೆಸ್ಸಿಂಗ್ ತಂತ್ರ ಮತ್ತು ಮ್ಯಾಗೊಟ್ ಸಾಂದ್ರತೆ ಮತ್ತು ಚಿಕಿತ್ಸೆಯ ಪ್ರತಿಕ್ರಿಯೆಯನ್ನು ಮೇಲ್ವಿಚಾರಣೆ ಕುರಿತು ಚಿಂತನ ಮಂಥನ ನಡೆಯಲಿದೆ ಎಂದು ತಿಳಿಸಿದ್ದಾರೆ.

## ಎಂಆರ್‌ಪಿಎಲ್‌ನಲ್ಲಿ ಭೀಕರ ಸ್ಫೋಟ; ಓರ್ವ ಸಾವು

● ವಿಕ್ರಮ ವಾಹಿನಿ । ಮಂಗಳೂರು

*ನಗರದ ಹೊರವಲಯದ ಕುಳೂರು ಸಮೀಪದ ಎಂಆರ್‌ಪಿಎಲ್‌ನ ಸಿಹೆಚ್‌ಟಿ ಘಟಕದಲ್ಲಿ ಬುಧವಾರ ಸಂಭವಿಸಿದ ಸ್ಫೋಟದಲ್ಲಿ ಗುತ್ತಿಗೆ ನೌಕರ ಮನೀಶ್ ಕರ್ಕೇರ (30) ಮೃತಪಟ್ಟಿದ್ದು, ರಾಜೇಶ್ ಬ್ಯಾಪ್ಟಿಸ್ಟ್ ಅವರಿಗೆ ಶೇ.35ರಷ್ಟು ಸುಟ್ಟ ಗಾಯಗಳಾಗಿವೆ. ಇತರ ಎಂಟು ಸಿಬ್ಬಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ.*

*ಸ್ಫೋಟದ ಬಳಿಕ ಕಾಣಿಸಿಕೊಂಡ ಬೆಂಕಿಯನ್ನು ಎಂಆರ್‌ಪಿಎಲ್‌ನ ಆಂತರಿಕ ಅಗ್ನಿಶಾಮಕ ದಳ ನಿಯಂತ್ರಣಕ್ಕೆ ತಂದಿದೆ. ಗಂಭೀರವಾಗಿ ಗಾಯಗೊಂಡ ರಾಜೇಶ್ ಅವರನ್ನು ಶ್ರೀನಿವಾಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.*

*ಸ್ಫೋಟದ ತೀವ್ರತೆಗೆ ಜೋಕಟ್ಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಟ್ಟಡಗಳು ನಡುಗಿದ್ದು, ಕೆಲವು ಮನೆಗಳ ಗೋಡೆಗಳಲ್ಲಿ ಬಿರುಕು ಕಾಣಿಸಿಕೊಂಡಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಮಂಗಳೂರು ವಿಮಾನ ನಿಲ್ದಾಣದಲ್ಲೂ ಕಂಪನದ ಅನುಭವವಾಗಿದ್ದು, ಯಾವುದೇ ಮೂಲಸೌಕರ್ಯಕ್ಕೆ ಹಾನಿಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.*

*ಘಟನೆಯಿಂದ ಆತಂಕಗೊಂಡ ಜೋಕಟ್ಟೆ ನಿವಾಸಿಗಳು ಎಂಆರ್‌ಪಿಎಲ್ ಪ್ರವೇಶ ದ್ವಾರದ ಬಳಿ ಪ್ರತಿಭಟಿಸಿ, ಘಟನೆಯ ಕುರಿತು ಮಾಹಿತಿ ನೀಡಬೇಕು ಹಾಗೂ ಕೈಗಾರಿಕಾ ಅಪಾಯದ ಹಿನ್ನೆಲೆಯಲ್ಲಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಸ್ಫೋಟದ ನಿಖರ ಕಾರಣ ಪತ್ತೆಗೆ ತನಿಖೆ ಮುಂದುವರಿದಿದೆ.*

## ವಿಧಾನಸೌಧದಲ್ಲಿ ಉರ್ದು ದಿನಾಚರಣೆ: ಕೆಂಡಾಮಂಡಲರಾದ ಸುರೇಶ್ ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದಲ್ಲಿ ಕನ್ನಡ ಭಾಷೆ ಕನ್ನಡಿಗರ ಅಸ್ಮಿತೆ. ಈ ನಾಡಿನ ಅನನ್ಯತೆಯ ಸಂಕೇತವಾಗಿರುವ ವಿಧಾನಸೌಧವನ್ನು ಒಂದು ಸಮುದಾಯದ ಮತಬ್ಯಾಂಕ್ ಓಲೈಕೆಗೆ ಬಳಸಿಕೊಳ್ಳಲು ರಾಜ್ಯ ಸರ್ಕಾರ ಉರ್ದು ದಿನಾಚರಣೆ ಆಚರಿಸಲು ಮುಂದಾಗಿರುವುದು ದುರಂತವಾಗಿದೆ ಎಂದು ಮಾಜಿ ಸಚಿವ ಹಾಗೂ ಹಿರಿಯ ಬಿಜೆಪಿ ನಾಯಕ ಎಸ್. ಸುರೇಶ್ ಕುಮಾರ್ ಕೆಂಡಾಮಂಡಲವಾಗಿದ್ದಾರೆ.

ಈ ಕುರಿತು ತಮ್ಮ ಪ್ರತಿಕ್ರಿಯೆ ವ್ಯಕ್ತಪಡಿಸಿರುವ ಅವರು, ಸರ್ಕಾರ ಈ ನಿರ್ಧಾರವನ್ನು ತಕ್ಷಣವೇ ಹಿಂಪಡೆಯಬೇಕು. ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ರಾಜ್ಯದ ಶಕ್ತಿಸೌಧವಾದ ವಿಧಾನಸೌಧದ ಮೆಟ್ಟಿಲುಗಳ ಮೇಲೆ 'ಉರ್ದು ದಿನಾಚರಣೆ' ಆಚರಿಸಲು ಸಿದ್ಧತೆ ನಡೆಸುತ್ತಿದೆ. ನವೆಂಬರ್ 9ರಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉರ್ದು ದಿನಾಚರಣೆಯನ್ನು ಅದ್ಧೂರಿಯಾಗಿ ಆಚರಿಸಲು ಉದ್ದೇಶಿಸಿದೆ.



ಮಾಜಿ ಸಭಾಪತಿಗಳು ಮತ್ತು ಸಚಿವ ಯು.ಟಿ. ಖಾದರ್ ಅವರು ಈ ಕುರಿತು ಹೇಳಿಕೆ ನೀಡಿದ್ದಾರೆ. ಇದು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಸರ್ಕಾರದ ಆದ್ಯತೆಗಳ ಕುರಿತು ನೇರ ಪ್ರಶ್ನೆಗಳನ್ನು ಎತ್ತಿರುವ ಎಸ್.ಸುರೇಶ್ ಕುಮಾರ್ ಅವರು, ಕನ್ನಡದ ನೆಲದಲ್ಲಿ ಉರ್ದುವಿಗೇಕೆ ಈ ಪ್ರಾಮುಖ್ಯತೆ? ಎನ್ನುವುದನ್ನು ಕನ್ನಡಿಗರು ಆಲೋಚಿಸಬೇಕು ಎಂದು ತಿಳಿಸಿದ್ದಾರೆ. ಸರ್ಕಾರದ ಈ ನಿಲುವನ್ನು ತರಾಟೆಗೆ ತೆಗೆದುಕೊಂಡಿರುವ ಅವರು, "ಇಲ್ಲಿ ಪ್ರಶ್ನೆ ಉರ್ದು ಭಾಷೆಯದ್ದಲ್ಲ, ಬದಲಿಗೆ ಸರ್ಕಾರದ ಆದ್ಯತೆಯದ್ದಾಗಿದೆ. ಕನ್ನಡದ ನೆಲ, ಕಾಂಗ್ರೆಸ್ ಸರ್ಕಾರದ ನೇತೃತ್ವದಲ್ಲಿ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಇಂತಹ ವೈಭವದ ವೇದಿಕೆ ಎಷ್ಟು ಬಾರಿ ಲಭಿಸಿದೆ? ಕನ್ನಡದ ಶ್ರೀಮಂತ ಉಪಭಾಷೆಗಳಿಗೆ ಸಿಗದ ಇಂತಹ ಮಹತ್ವ ಮತ್ತು ಪ್ರಾಮುಖ್ಯತೆಯನ್ನು ಉರ್ದು ಭಾಷೆಗೆ ನೀಡುತ್ತಿರುವುದು ಏಕೆ?" ಎಂದು ಪ್ರಶ್ನಿಸಿದ್ದಾರೆ.

ಮತಬ್ಯಾಂಕ್ ರಾಜಕಾರಣಕ್ಕೆ ವಿಧಾನಸೌಧ ವೇದಿಕೆಯಾಗದಿರಲಿ ಎಂದಿರುವ ಅವರು, ಕನ್ನಡಿಗರ ತೆರಿಗೆ ಹಣದಿಂದ ನಡೆಯುವ ಸರ್ಕಾರಿ ವೇದಿಕೆಗಳು ಕೇವಲ ವೋಟ್‌ಬ್ಯಾಂಕ್ ರಾಜಕಾರಣದ ಕೇಂದ್ರಗಳಾಗಬಾರದು. ಒಂದು ಸಮುದಾಯವನ್ನು ಓಲೈಸುವ ಉದ್ದೇಶದಿಂದ ಕನ್ನಡಿಗರ ಸ್ವಾಭಿಮಾನ ಪಣಕ್ಕಿಡಬಾರದು. ಕನ್ನಡಿಗರೆಲ್ಲರ ಹೆಮ್ಮೆಯ ಸಂಕೇತವಾದ ವಿಧಾನಸೌಧವನ್ನು ದುರುಪಯೋಗಪಡಿಸಿಕೊಳ್ಳಬಾರದು. ಇದನ್ನು ಬಿಜೆಪಿ ಬಲವಾಗಿ ಖಂಡಿಸುತ್ತದೆ. ಯಾವುದೇ ಕಾರಣಕ್ಕೂ ಇದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಓಲೈಕೆ ರಾಜಕಾರಣದ ತೀರ್ಮಾನವನ್ನು ರಾಜ್ಯ ಸರ್ಕಾರ ಕೂಡಲೇ ಕೈಬಿಡಬೇಕು ಎಂದು ಅವರು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಕನ್ನಡದ ನೆಲದಲ್ಲಿ ಉರ್ದುವಿಗೇಕೆ ಈ ಪ್ರಾಮುಖ್ಯತೆ? ಎಂದು ಪ್ರಶ್ನಿಸಿರುವ ಅವರು, ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಇಂತಹ ವೈಭವದ ವೇದಿಕೆ ಎಷ್ಟು ಬಾರಿ ಲಭಿಸಿದೆ? ಎಂದು ರಾಜ್ಯ ಸರ್ಕಾರವನ್ನು ಕೇಳಿದ್ದಾರೆ.

# ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಿ, ತುರ್ತು ಸಮಸ್ಯೆಗಳಿಗೆ ತಕ್ಷಣ ಪರಿಹಾರ: ಕೃಷ್ಣ ಬೈರೇಗೌಡ

● ವಿಕ್ರಮ ವಾಹಿನಿ । ಬೆಂಗಳೂರು

ಸಾರ್ವಜನಿಕರಿಗೆ ಎದುರಾಗುತ್ತಿರುವ ರಸ್ತೆ, ಸಂಚಾರ, ಒಳಚರಂಡಿ ಸೇರಿದಂತೆ ತುರ್ತು ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಲ್ಪಿಸುವುದರ ಜತೆಗೆ ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಸಮಗ್ರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಪೂರ್ವ ಭಾಗದ ಸರ್ಜಾಪುರ ರಸ್ತೆ, ದೊಮ್ಮಸಂದ್ರ, ಗುಂಜೂರು, ವರ್ತೂರು, ಬಳಗೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆಯುತ್ತಿರುವ ರಸ್ತೆ ಮತ್ತು ಮೂಲಸೌಕರ್ಯ ಕಾಮಗಾರಿಗಳನ್ನು ಪರಿಶೀಲಿಸಿದ ಅವರು, ಕಾಮಗಾರಿಗಳ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ರಸ್ತೆ ಗುಂಡಿ, ನೀರು ನಿಲುಗಡೆ, ಸಂಚಾರ ಅಡಚಣೆ ಸೇರಿದಂತೆ ಸಾರ್ವಜನಿಕರಿಗೆ ತಕ್ಷಣ ತೊಂದರೆ ಉಂಟುಮಾಡುತ್ತಿರುವ ಸಮಸ್ಯೆಗಳನ್ನು ಗುರುತಿಸಿ ಮೊದಲ ಆದ್ಯತೆಯಲ್ಲಿ ಪರಿಹರಿಸಬೇಕು. ತಾತ್ಕಾಲಿಕ ಪರಿಹಾರ ಸಾಧ್ಯವಿರುವ ಕಡೆ ಕೂಡಲೇ ಕಾಮಗಾರಿ ಕೈಗೊಂಡು ಸಂಚಾರ ಸುಗಮಗೊಳಿಸಬೇಕು. ದೀರ್ಘಾವಧಿಯ ಪರಿಹಾರ ಅಗತ್ಯವಿರುವ ಕಡೆ ಸಮಗ್ರ ಯೋಜನೆ ರೂಪಿಸಿ ಶಾಶ್ವತ ಪರಿಹಾರ ಒದಗಿಸಬೇಕು ಎಂದು ನಿರ್ದೇಶನ ನೀಡಿದರು.



**ಜಾಗ, ಒತ್ತುವರಿ ತೆರವಿಗೆ ಕ್ರಮ:** ರಸ್ತೆ ಅಗಲೀಕರಣ ಮತ್ತು ಅಭಿವೃದ್ಧಿಗೆ ಅಗತ್ಯವಿರುವ ಜಾಗದ ಲಭ್ಯತೆ ಹಾಗೂ ಭೂಸ್ವಾಧೀನದ ಸ್ಥಿತಿಗತಿ ಕುರಿತು ಸ್ಪಷ್ಟ ಮಾಹಿತಿ ಪಡೆದುಕೊಳ್ಳಬೇಕು. ಜಾಗದ ಸಮಸ್ಯೆಯಿಂದ ಕಾಮಗಾರಿಗಳು ವಿಳಂಬವಾಗದಂತೆ ಪರ್ಯಾಯ ಹಾಗೂ ತಾತ್ಕಾಲಿಕ ಪರಿಹಾರಗಳನ್ನೂ ಪರಿಶೀಲಿಸಬೇಕು ಎಂದು ಹೇಳಿದರು. ಸರ್ಕಾರಿ ಜಾಗದ ಒತ್ತುವರಿ ತೆರವುಗೊಳಿಸುವಲ್ಲಿ ವಿಳಂಬ ಮಾಡಬಾರದು. ರಸ್ತೆ ಅಭಿವೃದ್ಧಿಗೆ ಅಗತ್ಯವಿರುವ ಜಾಗವನ್ನು ಗುರುತಿಸಿ ನಿಯಮಾನುಸಾರ ಒತ್ತುವರಿ ತೆರವು ಸೇರಿದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಡ್ರೈನೇಜ್ ಸಮಸ್ಯೆಗೆ ಶಾಶ್ವತ ಪರಿಹಾರ:** ನೀರು ನಿಲ್ಲುವ ಪ್ರದೇಶಗಳನ್ನು ಗುರುತಿಸಿ ಮಳೆನೀರು ಸರಾಗವಾಗಿ ಹರಿದುಹೋಗಲು ಅಗತ್ಯ ಡ್ರೈನೇಜ್ ವ್ಯವಸ್ಥೆ ಕಲ್ಪಿಸಬೇಕು. ಮುಖ್ಯ ಒಳಚರಂಡಿಗೆ ಸಂಪರ್ಕ ಕಲ್ಪಿಸುವ ಸಾಧ್ಯತೆಗಳನ್ನು ಪರಿಶೀಲಿಸಿ, ತಾತ್ಕಾಲಿಕ ಪರಿಹಾರದ ಜತೆಗೆ ಸಮಸ್ಯೆ ಮರುಕಳಿಸದಂತೆ ಶಾಶ್ವತ ಕಾಮಗಾರಿ ಕೈಗೊಳ್ಳಬೇಕು ಎಂದರು.

**ಭವಿಷ್ಯದ ಯೋಜನೆ ಗಮನದಲ್ಲಿರಲಿ:** ಎಲಿವೇಟೆಡ್ ರಸ್ತೆ, ಮೆಟ್ರೋ ಸೇರಿದಂತೆ ಭವಿಷ್ಯದಲ್ಲಿ ಕೈಗೆತ್ತಿಕೊಳ್ಳಲಿರುವ ಸಾರಿಗೆ ಯೋಜನೆಗಳನ್ನು ಗಮನದಲ್ಲಿಟ್ಟುಕೊಂಡೇ ಪ್ರಸ್ತುತ ರಸ್ತೆ ಕಾಮಗಾರಿಗಳನ್ನು ಯೋಜಿಸಬೇಕು. ಕೆಆರ್‌ಡಿಸಿಎಲ್, ಮೆಟ್ರೋ ಹಾಗೂ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಒಂದು ಕಾಮಗಾರಿಗಾಗಿ ನಿರ್ಮಿಸಿದ ರಸ್ತೆ ಅಥವಾ ಮೂಲಸೌಕರ್ಯವನ್ನು ಮತ್ತೊಂದು ಯೋಜನೆಗಾಗಿ ಮತ್ತೆ ಒಡೆಯುವ ಪರಿಸ್ಥಿತಿ ಬರದಂತೆ ಸಮಗ್ರ ಯೋಜನೆ ರೂಪಿಸಬೇಕು ಎಂದು ತಿಳಿಸಿದರು. ಚಿರಸ್ತೆಗೆ ಅಡ್ಡಿಯಾಗುತ್ತಿರುವ ಬೆಸ್ಕಾಂನ ಟ್ರಾನ್ಸ್‌ಫಾರ್ಮರ್‌ಗಳು ಮತ್ತು ವಿದ್ಯುತ್ ಕಂಬಗಳನ್ನು ಗುರುತಿಸಿ ಅಗತ್ಯವಿರುವ ಕಡೆ ಸ್ಥಳಾಂತರಿಸಬೇಕು. ಬಳಕೆಗೆ ಬಾರದ ಕಂಬಗಳನ್ನು ತೆರವುಗೊಳಿಸುವಂತೆಯೂ ಸೂಚಿಸಿದರು.

**'ಇರುವ ಜಾಗದಲ್ಲಾದರೂ ರಸ್ತೆ ನಿರ್ಮಿಸಿ'**

ದೊಮ್ಮಸಂದ್ರ-ವರ್ತೂರು ರಸ್ತೆ ಮಾರ್ಗದಲ್ಲಿ ಸಂಚಾರ ದಟ್ಟಣೆ ಹೆಚ್ಚಿರುವ ಹಿನ್ನೆಲೆಯಲ್ಲಿ ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನದ ಪ್ರಸ್ತಾಪವನ್ನು ಅಧಿಕಾರಿಗಳು ಮುಂದಿಟ್ಟಾಗ ಸಚಿವರು ಅಸಮಾಧಾನ ವ್ಯಕ್ತಪಡಿಸಿದರು. "ಭೂಸ್ವಾಧೀನದ ಪ್ರಕ್ರಿಯೆ ನಂತರ ನಡೆಯಲಿ. ಇರುವ ಜಾಗದಲ್ಲಾದರೂ ಮೊದಲು ಡೆಬ್ರಿಸ್ ತೆರವುಗೊಳಿಸಿ ಕನಿಷ್ಠ ಜಲ್ಲಿ ಹಾಕಿ ರಸ್ತೆ ನಿರ್ಮಿಸಿ" ಎಂದು ಕೆಆರ್‌ಡಿಸಿಎಲ್ ಅಧಿಕಾರಿಗಳಿಗೆ ಸೂಚಿಸಿದರು.

ವರ್ತೂರು ಕೆರೆ ಏರಿ ಮೇಲೆ ರಸ್ತೆ ನಿರ್ಮಿಸಲು ಸಾಕಷ್ಟು ಜಾಗವಿರುವಾಗ ಭೂಸ್ವಾಧೀನದ ಅಗತ್ಯವೇನು ಎಂದು ಪ್ರಶ್ನಿಸಿದ ಅವರು, ಗುಂಜೂರು-ದೊಮ್ಮಸಂದ್ರ ಮಾರ್ಗದಲ್ಲಿ ಹಲವು ಅಂಗಡಿಗಳು ಎಂಟು ಅಡಿಗೂ ಹೆಚ್ಚು ಜಾಗವನ್ನು ಒತ್ತುವರಿ ಮಾಡಿಕೊಂಡಿರುವುದನ್ನು ಪ್ರಸ್ತಾಪಿಸಿದರು. ಒತ್ತುವರಿ ಹೆಚ್ಚಾಗುವವರೆಗೆ ಅಧಿಕಾರಿಗಳು ಏನು ಮಾಡುತ್ತಿದ್ದರು ಎಂದು ಪ್ರಶ್ನಿಸಿದ ಅವರು, ಒತ್ತುವರಿಯಿಂದ ಸಂಚಾರ ಸಮಸ್ಯೆ ಉಲ್ಬಣಿಸಿರುವ ಹಿನ್ನೆಲೆಯಲ್ಲಿ ನಿಯಮಾನುಸಾರ ತ್ವರಿತ ಕ್ರಮ ಕೈಗೊಳ್ಳುವಂತೆ ತಾಕೀತು ಮಾಡಿದರು.

ರಸ್ತೆ ಗುಂಡಿ ಹಾಗೂ ಹಾನಿಗೊಳಗಾದ ರಸ್ತೆ ಭಾಗಗಳನ್ನು ಶೀಘ್ರ ದುರಸ್ತಿಪಡಿಸಿ, ಬಾಕಿ ಕಾಮಗಾರಿಗಳಿಗೆ ವೇಗ ನೀಡಬೇಕು. ರಸ್ತೆ ಬದಿಯ ಡೆಬ್ರಿಸ್, ಸಿಲ್ಟ್ ತೆರವುಗೊಳಿಸಿ, ಪಾದಚಾರಿ ಮಾರ್ಗಗಳನ್ನು ದುರಸ್ತಿಪಡಿಸಬೇಕು. ನೀರು ಸರಬರಾಜು ಕಾಮಗಾರಿಗಳಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗದಂತೆ ಕಾಮಗಾರಿ ನಡೆಸಬೇಕು ಎಂದು ಸೂಚಿಸಿದರು.

ಸ್ಥಳ ಪರಿಶೀಲನೆ ವೇಳೆ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ, ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್, ಅಪರ ಆಯುಕ್ತೆ ಲೋಖಂಡೆ ಸ್ನೇಹಲ್ ಸುಧಾಕರ್, ಜಂಟಿ ಆಯುಕ್ತೆ ಡಾ. ದಾಕ್ಷಾಯಿಣಿ ಕೆ., ಮುಖ್ಯ ಎಂಜಿನಿಯರ್ ಲೋಕೇಶ್ ಸೇರಿದಂತೆ ಕೆಆರ್‌ಡಿಸಿಎಲ್, ಬೆಸ್ಕಾಂ, ಮೆಟ್ರೋ, ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿ ತಿಂಗಳು ಸಾಧಕರಿಗೆ ಸನ್ಮಾನ: ಎಸ್.ರಘುನಾಥ್

● ವಿಕ್ರಮ ವಾಹಿನಿ | ಬೆಂಗಳೂರು

ಪ್ರತಿ ತಿಂಗಳು ಕೊನೆಯ ಶುಕ್ರವಾರ ನಾಡಿನ ಸಾಧಕರಿಗೆ ಸನ್ಮಾನ ಮತ್ತು ಕಲಾವಿದರಿಗೆ ಸಂಗೀತ ಸೇವೆ ಅವಕಾಶ ನೀಡಲಾಗಿದೆ. ಬ್ರಾಹ್ಮಣ ಮಹಾಸಭಾ ಕಲೆ, ಸಂಗೀತ, ಸಾಹಿತ್ಯ, ಸಂಸ್ಕೃತಿ ಉಳಿಸಲು ಸಹಕಾರ, ಪ್ರೋತ್ಸಾಹ ನೀಡುತ್ತಿದೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಎಸ್.ರಘುನಾಥ್ ರವರು ತಿಳಿಸಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಗಾಯಿತ್ರಿ ಭವನದಲ್ಲಿ ಎರಡು ದಿನಗಳ ಕಾಲ ಹಮ್ಮಿಕೊಂಡಿರುವ ಶ್ರೀ ವಿದ್ಯಾಗಣಪತಿ ಮಹೋತ್ಸವ ಕಾರ್ಯಕ್ರಮ ಮಹಾಮಂಗಳರತಿ, ವಿಶೇಷಪೂಜೆ ವಿಪ್ರ ಸಾಧಕರಿಗೆ ಸನ್ಮಾನ ಕಾರ್ಯಕ್ರಮಕ್ಕೂ ಮುನ್ನ ವಿಶೇಷ ಪೂಜೆ ಸಲ್ಲಿಸಿ ವಿಪ್ರ ಸಾಧಕರಿಗೆ ಸನ್ಮಾನಿಸಿ ಮಾತನಾಡಿದರು. ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ, ಗಾಯಕಿ ಅರ್ಚನ ಉಡುಪ ಸೇರಿದಂತೆ ಅನೇಕ ಮಹನೀಯರಿಗೆ ಸನ್ಮಾನ ಮಾಡಿರುವುದು ಈ ಬಾರಿಯ ವಿಶೇಷ. ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿ ಉಳಿಸಲು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸಹಕಾರ,



ಪ್ರೋತ್ಸಾಹ ನೀಡುತ್ತದೆ ಎಂದರು.

ಗಣೇಶ ಮಹೋತ್ಸವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ಸಂಗೀತ ಸೇವೆಯ ಜೊತೆಯಲ್ಲಿ ನಾಡಿಗೆ ಸೇವೆ ಸಲ್ಲಿಸಿದ ಗಣ್ಯರಿಗೆ ಸನ್ಮಾನಿಸಲಾಗುತ್ತಿದೆ.

ಮಹಾಸಭಾದಲ್ಲಿ ಸುಸಜ್ಜಿತ ಸಭಾಂಗಣ ನಿರ್ಮಿಸಲಾಗಿದೆ ಇಲ್ಲಿ ಕಲಾವಿದರಿಗೆ ಅತ್ಯಂತ ಕಡಿಮೆ ವೆಚ್ಚದಲ್ಲಿ ಸಭಾಂಗಣ ನೀಡಲಾಗುತ್ತಿದೆ ಎಂದು ನುಡಿದರು.

ಗಣೇಶ ಮಹೋತ್ಸವ ಸಂದರ್ಭದಲ್ಲಿ ವಿದುಷಿ ಡಾ. ಹೆಚ್.ಜಿ. ಅಮೃತವರ್ಷಿಣ, ವೇದಾಂತರತ್ನ, ವೇದಶ್ರೀ ಡಾ. ಬಿ.ಎನ್. ನಾಗರಾಜ್, ವೇದ ವಿದ್ವಾನ್ ಪಂ. ಡಾ. ಭೀಮಸೇನಾಚಾರ್ಯ ಅತನೂರು, ವೇದ ವಿದ್ವಾನ್ ಆಗಮಶಾಸ್ತ್ರ ಪ್ರವೀಣ ಬಿ.ಎಸ್. ಅನಂತ ಕೃಷ್ಣ ಭಟ್, ವಿದ್ವಾನ್ ಡಾ. ಕೆ.ಎಸ್. ಅರುಣ್ ಕುಮಾರ್



ಆಚಾರ್ಯ, ಫಾಲಚಂದ್ರ ಶಾಸ್ತ್ರೀ, ವೇದ ವಿದ್ವಾನ್ ಡಾ. ವೆಂಕಟೇಶಾಚಾರ್ ಬಿ.ಆರ್. ಅಡ್ಡಗದ್ದೆ ಕೃಷ್ಣಮೂರ್ತಿ ಭಟ್ಟರು, ಪ್ರಭಾಕರ್ ಶಾಸ್ತ್ರೀ, ಶ್ರೀಮತಿ ಅರ್ಚನ ಉಡುಪ, ಶ್ರೀಮತಿ ಎಂ.ಕೆ. ವಿಶಾಲಾಕ್ಷಿರವರು ಡಾ. ಶ್ರೀಕಾಂತಮ್ ನಾಗೇಂದ್ರ ಶಾಸ್ತ್ರೀ, ರೈಸ್ ಗ್ರೈನ್ ವೆಂಕಟೇಶ್, ವಿದುಷಿ ಶ್ರೀಮತಿ ಸುಮಾ ಕೃಷ್ಣಮೂರ್ತಿ, ವಿದ್ವಾನ್ ಎನ್. ರಾಜ್ ಕಮಲ್, ವಿದ್ವಾನ್ ಗಾನಕಲಾ ಎಸ್.ಎನ್. ಸ್ವಾಮಿ, ವಿದೂಷಿ ಡಾ. ಲಕ್ಷ್ಮೀ ರೇಖಾ ಅರುಣ್ ರವರಿಗೆ ಸನ್ಮಾನಿಸಲಾಯಿತು.

ಹಿರಿಯ ಉಪಾಧ್ಯಕ್ಷರಾದ ಆರ್.ಲಕ್ಷ್ಮೀಕಾಂತ್, ಖಜಾಂಚಿ ಸುಬ್ಬಣ್ಣ, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಅಸಗೋಡು ಜಯಸಿಂಹ, ಬಿಜೆಪಿ ಮುಖಂಡ ಪ್ರಹ್ಲಾದ್ ಬಾಬು, ದತ್ತಾತ್ರಿರವರು ಮತ್ತು ರಾಮ್ ಪ್ರಸಾದ್ ರವರು ಉಪಸ್ಥಿತರಿದ್ದರು.

## ತಾವರೆಕೆರೆ ಉದ್ಯಾನವನದಲ್ಲಿ 1 ಎಂಎಲ್‌ಡಿ ಎಸ್‌ಟಿಪಿ ಸ್ಥಾಪನೆಗೆ ಜಲಮಂಡಳಿ ಪ್ರಸ್ತಾವನೆ

● ವಿಕ್ರಮ ವಾಹಿನಿ | ಬೆಂಗಳೂರು

ಸ್ಥಳೀಯ ನಿವಾಸಿಗಳು, ನಡಿಗೆದಾರರು ಹಾಗೂ ಉದ್ಯಾನವನ ಬಳಕೆದಾರರ ನಿರಂತರ ಮನವಿಗೆ ಸ್ಪಂದಿಸಿರುವ ಬೆಂಗಳೂರು ಜಲಮಂಡಳಿ, ತಾವರೆಕೆರೆ ಉದ್ಯಾನವನದ ಸಮೀಪ 1 ಎಂಎಲ್‌ಡಿ ಸಾಮರ್ಥ್ಯದ ವಿಕೇಂದ್ರೀಕೃತ ಒಳಚರಂಡಿ ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ) ಸ್ಥಾಪಿಸಲು ಮುಂದಾಗಿದೆ.

ತಾವರೆಕೆರೆ ಉದ್ಯಾನವನದ ಸಮೀಪದ ಮಳೆನೀರು ಕಾಲುವೆಯಲ್ಲಿ ಒಳಚರಂಡಿ ನೀರು ಹರಿಯುತ್ತಿರುವುದರಿಂದ ದುರ್ವಾಸನೆ, ನೊಣಗಳ ಕಾಟ ಹಾಗೂ ಅನೈರ್ಮಲ್ಯ ಉಂಟಾಗುತ್ತಿದೆ ಎಂಬ ದೂರುಗಳು ಬಂದ ಹಿನ್ನೆಲೆಯಲ್ಲಿ ಈ ಯೋಜನೆ ರೂಪಿಸಲಾಗಿದೆ.

ಪ್ರಸ್ತಾವಿತ ಘಟಕದಲ್ಲಿ ಕಾಲುವೆಗೆ ಹರಿಯುವ ಒಳಚರಂಡಿ ನೀರನ್ನು ಸಂಸ್ಕರಿಸಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ನಿಗದಿಪಡಿಸಿರುವ ಗುಣಮಟ್ಟಕ್ಕೆ ಅನುಗುಣವಾಗಿ ಸಂಸ್ಕರಿಸಲಾಗುವುದು. ಇದರಿಂದ ಕಾಲುವೆಗೆ ಸೇರುವ ತ್ಯಾಜ್ಯನೀರಿನ ಪ್ರಮಾಣ ಕಡಿಮೆಯಾಗುವುದರ ಜತೆಗೆ ಉದ್ಯಾನವನ ಹಾಗೂ ಸುತ್ತಮುತ್ತಲಿನ ಪರಿಸರದ ನೈರ್ಮಲ್ಯ ಸುಧಾರಿಸುವ ನಿರೀಕ್ಷೆಯಿದೆ.

ಪ್ರಸ್ತುತ ಉದ್ಯಾನವನದ ಗಿಡಗಳು ಹಾಗೂ ಹಸಿರು ಪ್ರದೇಶಗಳ ನಿರ್ವಹಣೆಗೆ ಬಳಸುತ್ತಿರುವ ಕುಡಿಯುವ ನೀರಿನ ಬದಲಿಗೆ ಎಸ್‌ಟಿಪಿಯಿಂದ ಸಂಸ್ಕರಿಸಿದ ನೀರನ್ನು ತೋಟಗಾರಿಕೆಗೆ ಬಳಸಲು ಉದ್ದೇಶಿಸಲಾಗಿದೆ. ಹೆಚ್ಚುವರಿ ಸಂಸ್ಕರಿತ ನೀರನ್ನು ನಿರ್ಮಾಣ ಕಾಮಗಾರಿ, ರಸ್ತೆ ಹಾಗೂ ಆವರಣಗಳ ಸ್ವಚ್ಛತೆ ಸೇರಿದಂತೆ ವಿವಿಧ ಕುಡಿಯೇತರ ಬಳಕೆಗೆ ಬಳಸಲು ಯೋಜಿಸಲಾಗಿದೆ.

ಯೋಜನೆ ಜಾರಿಯಾದರೆ ದುರ್ವಾಸನೆ ಹಾಗೂ ನೊಣಗಳ ಕಾಟ ನಿಯಂತ್ರಣ, ಕಾಲುವೆಗಳಿಗೆ ಸೇರುವ ತ್ಯಾಜ್ಯನೀರಿನ ಪ್ರಮಾಣ ಕಡಿತ, ಕುಡಿಯುವ ನೀರಿನ ಉಳಿತಾಯ ಮತ್ತು ಸಂಸ್ಕರಿತ ನೀರಿನ ಮರುಬಳಕೆಗೆ ಅನುಕೂಲವಾಗಲಿದೆ. ಉದ್ಯಾನವನ ಹಾಗೂ ಸುತ್ತಮುತ್ತಲಿನ ಪ್ರದೇಶದ ಪರಿಸರ ಗುಣಮಟ್ಟವೂ ಸುಧಾರಿಸಲಿದೆ ಎಂದು ಜಲಮಂಡಳಿ ತಿಳಿಸಿದೆ.

ಯೋಜನೆಯ ಟೆಂಡರ್ ಪ್ರಕ್ರಿಯೆ ಸದ್ಯ ಪರಿಶೀಲನೆ ಮತ್ತು ಮೌಲ್ಯಮಾಪನ ಹಂತದಲ್ಲಿದ್ದು, ನಿಯಮ ಹಾಗೂ ಟೆಂಡರ್ ಷರತ್ತುಗಳಿಗೆ ಅನುಗುಣವಾಗಿ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಎಂದು ಜಲಮಂಡಳಿ ತಿಳಿಸಿದೆ.

## ಪಶುವೈದ್ಯಾಧಿಕಾರಿ ಪರೀಕ್ಷೆಗೂ ಮುನ್ನ ಪ್ರಶ್ನೆಪತ್ರಿಕೆ ಸೋರಿಕೆ

1ನೇ ಪುಟದಿಂದ

ಮರುದಿನ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಾಹನ ವ್ಯವಸ್ಥೆಯನ್ನೂ ಆರೋಪಿಗಳು ಮಾಡಿದ್ದರು ಎಂದು ಇ.ಡಿ. ಹೇಳಿದೆ.

**40 ಲಕ್ಷದವರೆಗೆ ವಸೂಲಿ:** ನೇಮಕಾತಿ ಅಕ್ರಮಕ್ಕಾಗಿ ಆರಂಭದಲ್ಲಿ ಪ್ರತಿ ಅಭ್ಯರ್ಥಿಯಿಂದ ಸುಮಾರು 80 ಲಕ್ಷಕ್ಕೆ ಬೇಡಿಕೆ ಇಡಲಾಗಿತ್ತು. ಬಳಿಕ ಮಾತುಕತೆ ಮೂಲಕ 30ರಿಂದ 40 ಲಕ್ಷದವರೆಗೆ ಮೊತ್ತ ನಿಗದಿಪಡಿಸಲಾಗಿತ್ತು ಎಂದು ಇ.ಡಿ. ತಿಳಿಸಿದೆ. ಮುಂಗಡ ಹಣವನ್ನು ನಗದು ಹಾಗೂ ಬ್ಯಾಂಕ್ ಖಾತೆಗಳ ಮೂಲಕ ಸ್ವೀಕರಿಸಲಾಗಿದ್ದು, ಉಳಿದ ಮೊತ್ತಕ್ಕೆ ಸಹಿ ಮಾಡಿದ ಖಾಲಿ ಚೆಕ್‌ಗಳು ಮತ್ತು ಪ್ರಾಮಿಸರಿ ನೋಟ್‌ಗಳನ್ನು ಪಡೆಯಲಾಗಿತ್ತು ಎನ್ನಲಾಗಿದೆ.

ಲಂಚದ ಹಣದ ವಹಿವಾಟಿಗೆ ಬೀದರ್‌ನ ಓಂ ಲಕ್ಷ್ಮೀ ಸೌಹಾರ್ದ ಸಹಕಾರಿ ಸಂಘದ ಬ್ಯಾಂಕ್ ಖಾತೆಯನ್ನು ಬಳಸಿಕೊಂಡಿರುವುದು ತನಿಖೆಯಲ್ಲಿ ಪತ್ತೆಯಾಗಿದೆ. ಅಕ್ರಮದಿಂದ ಬಂದ ಹಣವನ್ನು ಮರೆಮಾಚಲು ಚಿನ್ನಾಭರಣ ಖರೀದಿ, ವಿಮಾನ ಪ್ರಯಾಣಕ್ಕೆ ನಗದು ಪಾವತಿ ಹಾಗೂ ವಿವಿಧ ಬ್ಯಾಂಕ್ ವಹಿವಾಟುಗಳನ್ನು ನಡೆಸಿರುವುದಾಗಿ ಇ.ಡಿ. ಹೇಳಿದೆ.

**ಅಕ್ರಮ ಹಣ ವರ್ಗಾವಣೆ ತನಿಖೆ:** ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಹಲವು ಎಫ್‌ಐಆರ್‌ಗಳು ದಾಖಲಾಗಿದ್ದವು.

ಬಳಿಕ ಅಕ್ರಮ ಹಣ ವರ್ಗಾವಣೆ ಆರೋಪದಡಿ ಇ.ಡಿ. ಪ್ರತ್ಯೇಕ ತನಿಖೆ ಆರಂಭಿಸಿತ್ತು. ಹಣದ ಅಕ್ರಮ ವಹಿವಾಟಿಗೆ ಸಂಬಂಧಿಸಿದ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ತನಿಖೆ ಮುಂದುವರಿದಿದೆ ಎಂದು ಸಂಸ್ಥೆ ತಿಳಿಸಿದೆ.

ಪ್ರಶ್ನೆಪತ್ರಿಕೆ ಪಡೆದ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಮುನ್ನ ನಿರ್ದಿಷ್ಟ ಸ್ಥಳದಲ್ಲಿ ತರಬೇತಿ ಹಾಗೂ ಉತ್ತರಗಳನ್ನು ಅಭ್ಯಾಸ ಮಾಡಿಸಲಾಗಿತ್ತು ಎನ್ನಲಾಗಿದೆ. ಪರೀಕ್ಷೆಯಲ್ಲಿ ಯಾವ ಪ್ರಶ್ನೆಗಳಿಗೆ ಆದ್ಯತೆ ನೀಡಬೇಕು ಎಂಬುದರ ಬಗ್ಗೆಯೂ ಅಭ್ಯರ್ಥಿಗಳಿಗೆ ಮಾರ್ಗದರ್ಶನ ನೀಡಲಾಗಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ.

## ನಕಲಿ ಜಿಪಿಎಸ್ ಫೋಟೋ ವಂಚನೆ: ತನಿಖೆಗೆ ಆದೇಶ

● ವಿಕ್ರಮ ವಾಹಿನಿ | ಬೆಂಗಳೂರು

ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೂಲಿ ಕಾರ್ಮಿಕರ ನಕಲಿ ಜಿಪಿಎಸ್ ಫೋಟೋ ತೆಗೆದು ವಂಚಿಸಲಾಗುತ್ತಿದೆ ಎಂಬ ವರದಿ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತನಿಖೆಗೆ ಆದೇಶ ನೀಡಿದ್ದಾರೆ.



ಇಲಾಖೆಯ ಕಾರ್ಯದರ್ಶಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಕೊಪ್ಪಳ ಜಿಲ್ಲೆಯಲ್ಲಿ ಮೇಟಿಗಳು ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಕೆಲಸಗಾರರು ಹೋಗದಿದ್ದರೂ ವಿಡಿಯೋ ಚಿತ್ರೀಕರಣ ಮಾಡಿಸಿ ಆ ವಿಡಿಯೋ ಪ್ಲೇ ಆಗುತ್ತಿರುವಾಗ ಮತ್ತೊಂದು ಮೊಬೈಲ್ ನಲ್ಲಿ ಜಿಪಿಎಸ್ ಫೋಟೋ ತೆಗೆಸಿ ವಂಚಿಸುತ್ತಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಯಾಗಿದ್ದು, ಈ ಬಗ್ಗೆ ಜಂಟಿ ನಿರ್ದೇಶಕರ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸಿ 4 ದಿನಗಳ ಒಳಗಾಗಿ ವರದಿ ಸಲ್ಲಿಸಲು ಸೂಚಿಸಿದ್ದಾರೆ.

ಈ ರೀತಿ ನಕಲಿ ಜಿಪಿಎಸ್ ಫೋಟೋ ತೆಗೆದು ಪ್ರತಿನಿತ್ಯ 20–30 ಸಾವಿರ ರೂ. ವಂಚನೆ ಮಾಡುತ್ತಿದ್ದಾರೆ, ಕೆಲಸ ಮಾಡದೆಯೇ ಹಾಜರಾತಿ ಹಾಕಿಸುತ್ತಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಯಾಗಿತ್ತು.

ಇದನ್ನು ಗಂಭೀರವಾಗಿ ಪರಿಗಣಿಸಿರುವ ಈಶ್ವರ ಖಂಡ್ರೆ, ವರದಿಯಲ್ಲಿ ಅಂಶ ಸತ್ಯವಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಳ್ಳಬೇಕಾದ ಶಿಫಾರಸಿನೊಂದಿಗೆ ವಾಸ್ತವಾಂಶದ ವರದಿಯನ್ನು ಸಲ್ಲಿಸುವಂತೆ ಮತ್ತು ಈ ರೀತಿ ತಂತ್ರಜ್ಞಾನವನ್ನೇ ವಂಚಿಸಿ ಹಾಜರಾತಿ ಹಾಕದಂತೆ ತಡೆಯಲು ಏನು ಕ್ರಮ ಕೈಗೊಳ್ಳಬಹುದು ಎಂಬ ಬಗ್ಗೆ ತಜ್ಞರೊಂದಿಗೆ ಸಮಾಲೋಚಿಸಿ ಉಪಕ್ರಮ ಕೈಗೊಳ್ಳುವಂತೆಯೂ ಸೂಚಿಸಿದ್ದಾರೆ.

ಯಂತ್ರಗಳ ಮೂಲಕ ಕಾಮಗಾರಿ ನಡೆಸಿ, ಕೂಲಿ ಕಾರ್ಮಿಕರ ಅಕ್ರಮ ಹಾಜರಾತಿ ಹಾಕಿಸುವುದನ್ನು ತಪ್ಪಿಸಲು ವಿಬಿಜಿ ರಾಮ್ ಜಿಯಡಿ ಕೂಲಿಗೆ ಬರುವವರು ಕಾಮಗಾರಿ ನಡೆಯುವ ಸ್ಥಳದಲ್ಲಿ ಕೆಲಸ ಮಾಡುತ್ತಿರುವ ಜಿಪಿಎಸ್ ಫೋಟೋ ತೆಗೆದು ಎನ್.ಎಂ.ಎಂ.ಎಸ್. ಆಪ್ ನಲ್ಲಿ ಅಪ್ ಲೋಡ್ ಮಾಡುವುದನ್ನು ಕಡ್ಡಾಯ ಮಾಡಲಾಗಿದೆ. ಆದರೆ ಕೆಲವರು ಈ ತಂತ್ರಜ್ಞಾನಕ್ಕೆ ಸವಾಲು ಹಾಕಿದ್ದು, ಸರ್ಕಾರ ಈ ಬಗ್ಗೆ ಕ್ರಮಕ್ಕೆ ಮುಂದಾಗಿದೆ.



ಸಿಎಂ ಡಿ ಕೆ ಶಿವಕುಮಾರ್ ಚಾಮರಾಜನಗರ ಜಿಲ್ಲೆ ಹನೂರಿನ ಕೆಎಚ್ ಬಿ ಹೆಲಿಪ್ಯಾಡ್ ಬಳಿ ಸಾರ್ವಜನಿಕರ ಅಹವಾಲುಗಳನ್ನು ಬುಧವಾರ ಸ್ವೀಕರಿಸಿದರು.

## ಮುಂದಿನ 3 ಗಂಟೆಗಳಲ್ಲಿ ರಾಜ್ಯದ ಹಲವೆಡೆ ಮಳೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ಹಲವು ಜಿಲ್ಲೆಗಳಲ್ಲಿ ಮುಂದಿನ ಮೂರು ಗಂಟೆಗಳಲ್ಲಿ ಗುಡುಗು ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದು, 17 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.

ಬೆಳಗಾವಿ, ಧಾರವಾಡ, ಗದಗ, ಬಳ್ಳಾರಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಅಲರ್ಟ್ ಜಾರಿಯಲ್ಲಿದೆ. ಮಳೆಯ ವೇಳೆ ಗಂಟೆಗೆ 30ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದ್ದು, ಮರದ ಕೊಂಬೆಗಳು ಬೀಳುವುದು, ವಿದ್ಯುತ್ ವ್ಯತ್ಯಯ ಹಾಗೂ ರಸ್ತೆ ಸಂಚಾರಕ್ಕೆ ಅಡಚಣೆ ಉಂಟಾಗುವ ಸಾಧ್ಯತೆ ಇದೆ. ಸಾರ್ವಜನಿಕರು ಹಾಗೂ ವಾಹನ ಸವಾರರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

## ‘ನೀತಿ ಸಂಹಿತೆ ನೆಪದಲ್ಲಿ ಸಾರ್ವಜನಿಕ ಸೇವೆಗೆ ಅಡ್ಡಿಯಾಗದಿರಲಿ’

● ವಿಕ್ರಮ ವಾಹಿನಿ | ಬೆಂಗಳೂರು

ಮಾದರಿ ನೀತಿ ಸಂಹಿತೆಯ ಹೆಸರಿನಲ್ಲಿ ಬರ ಪರಿಹಾರ, ಕುಡಿಯುವ ನೀರು, ಸಾರ್ವಜನಿಕ ಆರೋಗ್ಯ ಹಾಗೂ ಇತರೆ ಅತ್ಯಾವಶ್ಯಕ ಸೇವೆಗಳಿಗೆ ವ್ಯತ್ಯಯ ಉಂಟಾಗದಂತೆ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಸಂಬಂಧಿತ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಬೇಕು ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ರಾಜ್ಯಾಧ್ಯಕ್ಷ ಹಾಗೂ ವಿಧಾನಪರಿಷತ್ ಮಾಜಿ ಸದಸ್ಯ ರಮೇಶ್ ಬಾಬು ಮನವಿ ಮಾಡಿದ್ದಾರೆ.



ಕರ್ನಾಟಕ ವಿಧಾನಪರಿಷತ್ತಿನ ನಾಲ್ಕು ಕ್ಷೇತ್ರಗಳ ದ್ವೈವಾರ್ಷಿಕ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಆದರೆ ಸಾಮಾನ್ಯ ಆಡಳಿತದ ಭಾಗವಾಗಿ ನಡೆಯುವ ಅಗತ್ಯ ಸಾರ್ವಜನಿಕ ಸೇವೆ ಮತ್ತು ಅಭಿವೃದ್ಧಿ ಚಟುವಟಿಕೆಗಳನ್ನು ಅನಗತ್ಯವಾಗಿ ಸ್ಥಗಿತಗೊಳಿಸಬಾರದು ಎಂದು ಅವರು ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಅತ್ಯಾವಶ್ಯಕ ಸೇವೆಗಳಿಗೆ ವಿನಾಯಿತಿ: ಟ್ಯಾಂಕರ್ ಅಥವಾ ಇತರೆ ವ್ಯವಸ್ಥೆಗಳ ಮೂಲಕ ತುರ್ತು ಕುಡಿಯುವ ನೀರು ಪೂರೈಕೆ, ನೀರು ಪೂರೈಕೆ ವ್ಯವಸ್ಥೆಗಳ ದುರಸ್ತಿ, ಬರ ಪರಿಹಾರ, ಸಾರ್ವಜನಿಕ ಆರೋಗ್ಯ ಮತ್ತು ನೈರ್ಮಲ್ಯ ಕಾರ್ಯಗಳು ಮುಂದುವರಿಯಬೇಕು. ಈಗಾಗಲೇ ಅನುಮೋದನೆ ಪಡೆದು ಸ್ಥಳದಲ್ಲಿ ಆರಂಭವಾಗಿರುವ ಕಾಮಗಾರಿಗಳು ಹಾಗೂ ಪೂರ್ಣಗೊಂಡ ಕಾಮಗಾರಿಗಳಿಗೆ ನಿಯಮಾನುಸಾರ ಪಾವತಿ ಮಾಡುವುದಕ್ಕೂ ಅಡ್ಡಿಯಾಗಬಾರದು ಎಂದು ಮನವಿ ಮಾಡಿದ್ದಾರೆ.

ಆಡಳಿತದ ಸಾಮಾನ್ಯ ಕಾರ್ಯನಿರ್ವಹಣೆಗೆ ಅಗತ್ಯವಿರುವ ಶಾಸನಬದ್ಧ ಸೇವೆಗಳು ಹಾಗೂ ಮತದಾರರ ಮೇಲೆ ಪ್ರಭಾವ ಬೀರುವ ಉದ್ದೇಶವಿಲ್ಲದ ಅಗತ್ಯ ಸಾರ್ವಜನಿಕ ಕಾಮಗಾರಿಗಳಿಗೆ ನೀತಿ ಸಂಹಿತೆಯನ್ನು ನೆಪವಾಗಿ ಬಳಸಬಾರದು ಎಂದು ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ಪೌರಾಡಳಿತ ಸಚಿವ ಬಾಲಕೃಷ್ಣ ಅವರು ನಡೆಸಲು ಉದ್ದೇಶಿಸಿದ್ದ ‘ಪ್ರಜಾಸೇವಾ’ ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಅನುಮತಿ ನೀಡದಿರುವುದನ್ನು ಉಲ್ಲೇಖಿಸಿದ ರಮೇಶ್ ಬಾಬು, ಸಾರ್ವಜನಿಕರ ಅಹವಾಲು ಸ್ವೀಕರಿಸುವ ಇಂತಹ ಕಾರ್ಯಕ್ರಮವನ್ನು ನೀತಿ ಸಂಹಿತೆಯ ಹೆಸರಿನಲ್ಲಿ ತಡೆಹಿಡಿದಿರುವ ಬಗ್ಗೆ ಚುನಾವಣಾ ಆಯೋಗ ಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಏಕರೂಪದ ನಿರ್ದೇಶನಕ್ಕೆ ಆಗ್ರಹ: ಅಧಿಕಾರಿಗಳು ನೀತಿ ಸಂಹಿತೆಯನ್ನು ಅತಿಯಾಗಿ ಅಥವಾ ತಪ್ಪಾಗಿ ಅರ್ಥೈಸಿಕೊಳ್ಳುವುದರಿಂದ ಬರ ಪರಿಹಾರ, ಕುಡಿಯುವ ನೀರು ಹಾಗೂ ತುರ್ತು ಸಾರ್ವಜನಿಕ ಸೇವೆಗಳು ವಿಳಂಬವಾಗುತ್ತಿವೆ ಎಂದು ಅವರು ಆರೋಪಿಸಿದ್ದಾರೆ. ಎಲ್ಲ ಜಿಲ್ಲೆಗಳ ಚುನಾವಣಾಧಿಕಾರಿಗಳು ಹಾಗೂ ಸಂಬಂಧಿತ ಅಧಿಕಾರಿಗಳಿಗೆ ಸ್ಪಷ್ಟ ಮತ್ತು ಏಕರೂಪದ ಮಾರ್ಗಸೂಚಿ ನೀಡುವ ಮೂಲಕ ಜಿಲ್ಲೆಯಿಂದ ಜಿಲ್ಲೆಗೆ ವಿಭಿನ್ನ ರೀತಿಯ ಅನುಷ್ಠಾನವಾಗುವುದನ್ನು ತಪ್ಪಿಸಬೇಕು ಎಂದು ಮನವಿ ಮಾಡಿದ್ದಾರೆ.

ಅದೇ ವೇಳೆ, ಚುನಾವಣಾ ವ್ಯಾಪ್ತಿಯಲ್ಲಿ ಮತದಾರರ ಮೇಲೆ ಪ್ರಭಾವ ಬೀರುವ ಅಥವಾ ಯಾವುದೇ ಪಕ್ಷ, ಅಭ್ಯರ್ಥಿಗೆ ಅನ್ಯಾಯದ ಅನುಕೂಲ ಕಲ್ಪಿಸುವ ಚಟುವಟಿಕೆಗಳಿಗೆ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ರಮೇಶ್ ಬಾಬು ತಿಳಿಸಿದ್ದಾರೆ.

## ‘ಬರ ಪರಿಹಾರ ನೀಡಿಲ್ಲ, ಜನತಾ ನ್ಯಾಯಾಲಯಕ್ಕೆ ಹೋಗುತ್ತೇವೆ’

● ವಿಕ್ರಮ ವಾಹಿನಿ | ಬೆಂಗಳೂರು

ಬರಗಾಲದ ಹಿನ್ನೆಲೆಯಲ್ಲಿ ರೈತರಿಗಾಗಿ ಪ್ರತಿಪಕ್ಷ ಇಟ್ಟಿದ್ದ ಬೇಡಿಕೆಗಳನ್ನು ರಾಜ್ಯ ಸರ್ಕಾರ ಈಡೇರಿಸಿಲ್ಲ. ಎಕರೆಗೆ ಕನಿಷ್ಠ ರೂ 25 ಸಾವಿರ ಪರಿಹಾರ ನೀಡುವಂತೆ ಒತ್ತಾಯಿಸಿದ್ದರೂ, 50 ಲಕ್ಷ ರೈತರಿಗೆ ತಲಾ ರೂ 2,500 ನೀಡುವುದಾಗಿ ಘೋಷಿಸಿ ಕೈತೊಳೆದುಕೊಂಡಿದೆ. ಹೀಗಾಗಿ ಕೇಂದ್ರಕ್ಕೆ ನಿಯೋಗ ಕೊಂಡೊಯ್ಯುವ ಬದಲು ಜನರ ಬಳಿಗೆ, ಜನತಾ ನ್ಯಾಯಾಲಯಕ್ಕೆ ಹೋಗುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಶೇ.36ರಷ್ಟು ಹಾಗೂ ದಕ್ಷಿಣ ಒಳನಾಡಿನಲ್ಲಿ ಶೇ.46ರಷ್ಟು ಮಳೆ ಕೊರತೆಯಾಗಿದೆ. ರೈತರು, ಜಾನುವಾರುಗಳು ಮತ್ತು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದರೂ ಸರ್ಕಾರ ಸಮರ್ಪಕ ಪರಿಹಾರ ನೀಡಿಲ್ಲ ಎಂದು ಆರೋಪಿಸಿದರು.



ವಿಬಿ–ಜಿರಾಮ್‌ಜಿ ಯೋಜನೆಯಡಿ ವಲಸೆ ತಡೆಯಲು ಕ್ರಮ ಕೈಗೊಳ್ಳಬೇಕು, ಕುಡಿಯುವ ನೀರಿಗೆ ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂಬ ಬೇಡಿಕೆಗಳನ್ನೂ ಸರ್ಕಾರ ಪರಿಗಣಿಸಿಲ್ಲ. ಮತ್ತೊಂದೆಡೆ ಗ್ಯಾರಂಟಿ ಅನುಷ್ಠಾನ ಸಮಿತಿ ಹಾಗೂ ಭಾರತ್ ಜೋಡೋ ಸಮಿತಿಗಳಿಗೆ ಸಾವಿರಾರು ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ರೈತರಿಗೆ ಮಾತ್ರ ಬಿಡಿಗಾಸು ನೀಡಲಾಗುತ್ತಿದೆ ಎಂದು ದೂರಿದರು.

**‘ಸರ್ಕಾರದ ಹಣಕಾಸು ಸ್ಥಿತಿ ಆತಂಕಕಾರಿ’**

ಸರ್ಕಾರದ ಹಣಕಾಸು ಪರಿಸ್ಥಿತಿ ಹದಗೆಟ್ಟಿದ್ದು, ಈ ಹಣಕಾಸು ವರ್ಷದಲ್ಲಿ ಸುಮಾರು ರೂ 1.50 ಲಕ್ಷ ಕೋಟಿ ಸಾಲ ಮಾಡುವ ಅಗತ್ಯವಿದೆ ಎಂದು ಅಶೋಕ ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿ ರಾಜ್ಯದ ಸಾಲದಲ್ಲಿ ಶೇ.52.33ರಷ್ಟು ಪಾಲು ಬಂದಿದೆ ಎಂದು ಅವರು ಆರೋಪಿಸಿದರು. ಸರ್ಕಾರದ ಸಾಲದ ಅಂಕಿ–ಅಂಶಗಳ ಕುರಿತು ವಿವರ ನೀಡಿದ ಅವರು, ಹಿಂದಿನ ಸರ್ಕಾರಗಳ ಅವಧಿಯ ಸಾಲಕ್ಕೂ ಹೋಲಿಕೆ ಮಾಡಿದರು.

**ರೈತರ ಆತ್ಮಹತ್ಯೆ ಕುರಿತು ಆಕ್ರೋಶ:** ಮೈಕ್ರೋಫೈನಾನ್ಸ್ ಸಂಸ್ಥೆಗಳ ಕಿರುಕುಳದಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ಅಧಿವೇಶನದಲ್ಲೇ ಸರ್ಕಾರದ ಗಮನ ಸೆಳೆದಿದ್ದೆ. ಬ್ಯಾಂಕ್‌ಗಳು ಹಾಗೂ ಹಣಕಾಸು ಸಂಸ್ಥೆಗಳೊಂದಿಗೆ ಸಭೆ ನಡೆಸಿ ರೈತರಿಗೆ ರಕ್ಷಣೆ ನೀಡುವಂತೆ ಒತ್ತಾಯಿಸಿದ್ದರೂ ಕ್ರಮ ಕೈಗೊಂಡಿಲ್ಲ ಎಂದು ಅಶೋಕ ಹೇಳಿದರು.

ಮಂಡ್ಯ ಜಿಲ್ಲೆಯಲ್ಲಿ ನಡೆದ ಆತ್ಮಹತ್ಯೆ ಪ್ರಕರಣಗಳ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಗುತ್ತಿಗೆದಾರರಿಂದ ಕಮಿಷನ್ ಪಡೆಯಲಾಗುತ್ತಿದೆ ಎಂಬ ಆರೋಪಗಳ ಕುರಿತು ತನಿಖೆ ನಡೆಸಬೇಕು. ಪ್ರಣಾಳಿಕೆಯಲ್ಲಿ ನೀಡಿರುವ 590 ಭರವಸೆಗಳಲ್ಲಿ 245 ಮಾತ್ರ ಈಡೇರಿವೆ ಎಂದು ಆರೋಪಿಸಿದ ಅಶೋಕ, ಹಾಲಿನ ಪ್ರೋತ್ಸಾಹಧನವನ್ನು 7ಕ್ಕೆ ಹೆಚ್ಚಿಸುವ ಭರವಸೆಯನ್ನೂ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ನೈಸ್ ಯೋಜನೆಗೆ ಸಂಬಂಧಿಸಿದ ಅಕ್ರಮಗಳ ಕುರಿತು ತನಿಖೆ ನಡೆಸಿ ಸರ್ಕಾರಕ್ಕೆ ಆಗಿರುವ ನಷ್ಟವನ್ನು ಪತ್ತೆಹಚ್ಚಬೇಕು. ಈ ವಿಚಾರದಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

## ಭೂಪಾಲ್‌ನಲ್ಲಿ ಕೆಆರ್‌ಐಡಿಎಲ್ ಇಂಜಿನಿಯರ್ ಪರ್ವೀಜ್ ಪ್ರತ್ಯಕ್ಷ

● ವಿಕ್ರಮ ವಾಹಿನಿ | ಗದಗ

ಕಳೆದ 18 ದಿನಗಳಿಂದ ನಾಪತ್ತೆಯಾಗಿದ್ದ ಗದಗ ಕೆಆರ್‌ಐಡಿಎಲ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪರ್ವೀಜ್ ಅವರ ಪತ್ತೆ ಕಾರ್ಯಕ್ಕೆ ಮಹತ್ವದ ಸುಳಿವು ಸಿಕ್ಕಿದೆ. ಮೊಬೈಲ್ ಸಂಪರ್ಕ ಸ್ಥಗಿತಗೊಂಡಿದ್ದರೂ ಪೊಲೀಸರು ಸಿಸಿಟಿವಿ ದೃಶ್ಯಗಳ ಆಧಾರದಲ್ಲಿ ಅವರ ಪ್ರಯಾಣದ ಹಾದಿಯನ್ನು ಪತ್ತೆಹಚ್ಚಿದ್ದಾರೆ.

ತನಿಖೆ ವೇಳೆ ಪರ್ವೀಜ್ ಅವರ ಕೊನೆಯ ಮೊಬೈಲ್ ನೆಟ್‌ವರ್ಕ್ ಲೋಕೇಷನ್ ಆಂಧ್ರಪ್ರದೇಶದ ವಿಜಯವಾಡದಲ್ಲಿ ಪತ್ತೆಯಾಗಿತ್ತು. ಬಳಿಕ ಮೊಬೈಲ್ ಸ್ವಿಚ್ ಆಫ್ ಆಗಿದ್ದರಿಂದ ನೇರವಾಗಿ ಪತ್ತೆಹಚ್ಚಲು ಸಾಧ್ಯವಾಗಿರಲಿಲ್ಲ. ಹೀಗಾಗಿ ಪೊಲೀಸರು ವಿವಿಧ ಪ್ರದೇಶಗಳ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿದ್ದು, ಮಧ್ಯಪ್ರದೇಶದ ಭೂಪಾಲ್ ರೈಲು ನಿಲ್ದಾಣದಲ್ಲಿ ಪರ್ವೀಜ್ ಕಾಣಿಸಿಕೊಂಡಿರುವುದು ಇದೀಗ ಪತ್ತೆಯಾಗಿದೆ.

ವಿಜಯವಾಡದಿಂದ ಮುಂದಿನ ಪ್ರಯಾಣ ಕೈಗೊಂಡಿರುವ ಪರ್ವೀಜ್ ಸುಮಾರು 1,200 ಕಿ.ಮೀ. ವ್ಯಾಪ್ತಿಯಲ್ಲಿ ಸಂಚರಿಸಿರುವ ಸಾಧ್ಯತೆ ಇದ್ದು, ಮಾರ್ಗದಲ್ಲಿನ ವಿವಿಧ ಸಿಸಿಟಿವಿ ಕ್ಯಾಮರಾಗಳ ದೃಶ್ಯಗಳನ್ನು ಪರಿಶೀಲಿಸಿದ ಬಳಿಕ ಭೂಪಾಲ್‌ನಲ್ಲಿ ಅವರ ಚಲನವಲನದ ಸುಳಿವು ದೊರೆತಿದೆ.

ಮೊಬೈಲ್ ಫೋನ್ ಆಫ್ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಸಿಸಿಟಿವಿ ದೃಶ್ಯಗಳೇ ಪತ್ತೆ ಕಾರ್ಯಕ್ಕೆ ಪ್ರಮುಖ ಆಧಾರವಾಗಿವೆ. ಸದ್ಯ ಗದಗ ಪೊಲೀಸರ ತಂಡ ಭೂಪಾಲ್‌ನಲ್ಲಿ ಬೀಡುಬಿಟ್ಟಿದ್ದು, ರೈಲು ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸುವ ಜತೆಗೆ ಪರ್ವೀಜ್ ಅವರ ಚಲನವಲನದ ಮೇಲೆ ನಿಗಾ ಇರಿಸಿದೆ.

ಪರ್ವೀಜ್ ಯಾವ ಕಾರಣಕ್ಕೆ ನಾಪತ್ತೆಯಾಗಿದ್ದಾರೆ, ಸದ್ಯ ಸುರಕ್ಷಿತವಾಗಿದ್ದಾರೆಯೇ ಹಾಗೂ ಭೂಪಾಲ್‌ನಿಂದ ಮುಂದಿನ ಯಾವ ಸ್ಥಳಕ್ಕೆ ತೆರಳಿದ್ದಾರೆ ಎಂಬ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಮಹಾಜನ್ ವರದಿ ಅನುಷ್ಠಾನಕ್ಕೆ ಬೆಳಗಾವಿ ಪಾಲಿಕೆ ಸಮ್ಮತಿ

1ನೇ ಪುಟದಿಂದ

ಪಾಲಿಕೆ ಆಯುಕ್ತ ಕಾರ್ತಿಕ ಎಂ. ಅವರು, ಮಹಾಜನ್ ಆಯೋಗದ ವರದಿಯೇ ಗಡಿ ವಿಚಾರದಲ್ಲಿ ಅಂತಿಮವಾಗಿದ್ದು, ಅದನ್ನು ವಿಳಂಬವಿಲ್ಲದೆ ಸಂಪೂರ್ಣವಾಗಿ ಅನುಷ್ಠಾನಗೊಳಿಸುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿ 1988ರ ಮಾರ್ಚ್ 3ರಂದು ರಾಜ್ಯ ವಿಧಾನಸಭೆ ನಿರ್ಣಯ ಕೈಗೊಂಡಿರುವುದನ್ನು ಸಭೆಯ ಗಮನಕ್ಕೆ ತಂದರು. ಇದೇ ಮಾದರಿಯಲ್ಲಿ ಪಾಲಿಕೆಯಲ್ಲೂ ನಿರ್ಣಯ ಕೈಗೊಳ್ಳುವಂತೆ ರಾಜ್ಯ ಸರ್ಕಾರದಿಂದ ನಿರ್ದೇಶನ ಬಂದಿದೆ ಎಂದು ತಿಳಿಸಿದರು.

ಇದಾದ ಬಳಿಕ ಮೇಯರ್ ಪ್ರೀತಿ ಕಾಮಕರ ಗೊತ್ತುವಳಿ ಮಂಡಿಸಿ, ರಾಜ್ಯ ಸರ್ಕಾರ ಸೂಚಿಸಿರುವ ಎಲ್ಲ ಅಂಶಗಳನ್ನು ಒಳಗೊಂಡ ನಿರ್ಣಯವನ್ನು ಸಭೆಯ ಮುಂದೆ ಇಟ್ಟರು. ಪಾಲಿಕೆಯ 55 ಸದಸ್ಯರು ಮೇಜು ಕುಟ್ಟಿ ನಿರ್ಣಯಕ್ಕೆ ಬೆಂಬಲ ವ್ಯಕ್ತಪಡಿಸಿದರು. ಆದರೆ, ಮಹಾರಾಷ್ಟ್ರ ಏಕೀಕರಣ ಸಮಿತಿ (ಎಂಇಎಸ್)ಯ ಮೂವರು ಸದಸ್ಯರು ವಿರೋಧ ವ್ಯಕ್ತಪಡಿಸಿ ಸಭೆಯಿಂದ ಹೊರನಡೆದರು.

ಮಹಾಜನ್ ವರದಿ ಅನುಷ್ಠಾನಕ್ಕೆ ನಿರ್ಣಯ ಕೈಗೊಳ್ಳುವಂತೆ ಕಳೆದ ಆರು ತಿಂಗಳಿಂದ 25ಕ್ಕೂ ಹೆಚ್ಚು ಕನ್ನಡಪರ ಸಂಘಟನೆಗಳು ಹೋರಾಟ ನಡೆಸಿದ್ದವು. ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಹಾಗೂ ಕನ್ನಡ ಸಂಘಟನೆಗಳ ಕ್ರಿಯಾ ಸಮಿತಿ ಜಿಲ್ಲಾಧ್ಯಕ್ಷ ಅಶೋಕ ಚಂದರಗಿ ನೇತೃತ್ವದಲ್ಲಿ ನಡೆದ ಹೋರಾಟಕ್ಕೆ ಪಾಲಿಕೆಯ ನಿರ್ಣಯದ ಮೂಲಕ ಅಂತ್ಯ ಕಂಡಿದೆ ಎಂದು ಸಂಘಟನೆಗಳು ತಿಳಿಸಿವೆ.

ನಿರ್ಣಯ ಅಂಗೀಕಾರವಾಗುತ್ತಿದ್ದಂತೆ ಪಾಲಿಕೆ ಗೇಟ್ ಎದುರು ಕರವೇ ಶಿವರಾಮೇಗೌಡ ಬಣದ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಬಳಿಕ ರಾಣಿ ಚನ್ನಮ್ಮ ವೃತ್ತದಲ್ಲೂ ವಿಜಯೋತ್ಸವ ಆಚರಿಸಲಾಯಿತು. ಮಹಾದೇವ ತಳವಾರ, ವಾಜೀದ್ ಹಿರೇಕೊಡಿ, ಆರ್.ಪಿ. ಪಾಟೀಲ, ಮಹೇಶ ಶೀಗಿಹಳ್ಳಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಪಾಲಿಕೆ ನಾಮನಿರ್ದೇಶಿತ ಸದಸ್ಯ ರಮೇಶ ಸೊಂಟಕ್ಕಿ ಮಾತನಾಡಿ, ನಿರ್ಣಯವು ಬೆಳಗಾವಿಯ ಜನತೆ ಹಾಗೂ ಕನ್ನಡಪರ ಸಂಘಟನೆಗಳ ಗೆಲುವು. ಗಡಿ ವಿವಾದ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಗೆ ಬಂದಾಗ ಈ ನಿರ್ಣಯ ಕರ್ನಾಟಕದ ಪರ ಪ್ರಮುಖ ದಾಖಲೆಯಾಗಲಿದೆ ಎಂದು ಹೇಳಿದರು.

ಅಶೋಕ ಚಂದರಗಿ, ಇದು ಕನ್ನಡಿಗರ ಐತಿಹಾಸಿಕ ಗೆಲುವಾಗಿದ್ದು, ನಿರ್ಣಯವು ಸುಪ್ರೀಂ ಕೋರ್ಟ್‌ನಲ್ಲಿ ಪೂರಕ ದಾಖಲೆಯಾಗಲಿದೆ. ನಿರ್ಣಯಕ್ಕೆ ಕಾರಣವಾದ ರಾಜ್ಯ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಸಭೆಗೆ ಬೆಳಗಾವಿ ಎಸಿ ಶ್ರವಣ ನಾಯಿಕ ಅವರನ್ನು ವೀಕ್ಷಕರಾಗಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ನೇಮಿಸಿದ್ದರು. ಪಾಲಿಕೆ ನಿರ್ಣಯ ಕೈಗೊಳ್ಳದಿದ್ದರೆ ಸರ್ಕಾರ ಪಾಲಿಕೆಯನ್ನು ಸೂಪರ್‌ಸೀಡ್ ಮಾಡುವ ಸಾಧ್ಯತೆ ಇತ್ತು ಎಂಬ ಚರ್ಚೆಯೂ ಸಭೆಯಲ್ಲಿ ನಡೆಯಿತು.

ವೀಕ್ಷಕರ ನೇಮಕವನ್ನು ಆಡಳಿತಾರೂಢ ಬಿಜೆಪಿ ಸದಸ್ಯರು ಆಕ್ಷೇಪಿಸಿ, ಇದು ಕಾನೂನುಬಾಹಿರ ಎಂದು ಆರೋಪಿಸಿದರು. ಈ ಕುರಿತು ಸರ್ಕಾರಕ್ಕೆ ಪತ್ರ ಬರೆಯುವಂತೆ ನಿರ್ಣಯ ಕೈಗೊಳ್ಳಲಾಯಿತು. ಕಾಂಗ್ರೆಸ್ ಸದಸ್ಯರು ಇದಕ್ಕೆ ವಿರೋಧ ವ್ಯಕ್ತಪಡಿಸಿ, ಕಾನೂನು ಪ್ರಕಾರವೇ ವೀಕ್ಷಕರ ನೇಮಕವಾಗಿದೆ ಎಂದು ಸಮರ್ಥಿಸಿಕೊಂಡರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಗಾಂಧಿ ಸ್ಮಾರಕ ನಿಧಿ ಪ್ರಶಸ್ತಿಗೆ ಎರಡು ಕೃತಿಗಳ ಆಯ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಸಂಸ್ಥೆ ನೀಡುವ 2026ನೇ ಸಾಲಿನ ಶ್ರೀಮತಿ ಜಯಲಕ್ಷ್ಮಿ ಡಾ.ಹೊ.ಶ್ರೀನಿವಾಸಯ್ಯ ಸ್ಮಾರಕ ದತ್ತಿನಿಧಿ ಪ್ರಶಸ್ತಿಗೆ ಮಂಜುನಾಥ್ ಚಾಂದ್ ಅವರ 'ಮಹಾತ್ಮನ ಮಗಳು' ಹಾಗೂ ರಮೇಶ್ ಬಿಳಿಕೆರೆ ಅವರ 'ಮರೆಯಲಾಗದ ಮಾಣಿಕ್ಯ ಟಿ.ಎಸ್. ಸುಬ್ಬಣ್ಣ' ಕೃತಿಗಳು ಆಯ್ಕೆಯಾಗಿವೆ.

ಈ ಸಾಲಿನ ಉತ್ತಮ ಎನ್ಎಸ್ಎಸ್ ಪ್ರಶಸ್ತಿಗೆ ಪ್ರೊ. ಜಿ.ಬಿ. ಶಿವರಾಜು ಅವರನ್ನು ಆಯ್ಕೆ ಮಾಡಲಾಗಿದೆ. ರಾಜ್ಯಮಟ್ಟದ ಉತ್ತಮ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಪ್ರಶಸ್ತಿಗೆ ಮೈಸೂರಿನ ಡಾ. ರಾಘವೇಂದ್ರ ಆರ್. ಹಾಗೂ ಬೆಳಗಾವಿಯ ಡಾ. ಸುರೇಖಾ ಅಶೋಕ ಬೆಳಗಲಿ ಆಯ್ಕೆಯಾಗಿದ್ದಾರೆ.

ರಾಜ್ಯಮಟ್ಟದ ಉತ್ತಮ ಎನ್ಎಸ್ಎಸ್ ಸ್ವಯಂಸೇವಕ ಪ್ರಶಸ್ತಿಗೆ ತುಮಕೂರಿನ ಜಿ.ಎ. ಸಿದ್ದೇಶ್, ಮಸ್ಕಿಯ ನಾಗರಾಜ್, ಬೆಳ್ಳೂರಿನ ಕುಮಾರಿ ಚೈತ್ರಾ ಸಿ. ಹಾಗೂ ರಾಯಚೂರಿನ ಕು. ಜೆ.ಎಸ್. ಸುಷ್ಮಾ ಆಯ್ಕೆಯಾಗಿದ್ದಾರೆ.

**ಗಾಂಧಿ ಜಯಂತಿ ಕಾರ್ಯಕ್ರಮ:** ಗಾಂಧಿ ಜಯಂತಿ ಹಾಗೂ ವಿಶ್ವ ಅಹಿಂಸಾ ದಿನಾಚರಣೆ ಅಂಗವಾಗಿ ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

ಇದೇ ಸಂದರ್ಭದಲ್ಲಿ ಅರವಿಂದ ಚೊಕ್ಕಾಡಿ ಅವರ 'ಆಸುಪಾಸಿನಲ್ಲಿ ಗಾಂಧಿ', ಕೆ.ಎಸ್. ನರಸಿಂಹಸ್ವಾಮಿ ಅವರ ಅನುವಾದದ 'ನನ್ನ ಕನಸಿನ ಭಾರತ', 'ಮೋಹನ ಮಾಲೆ' ಹಾಗೂ ಡಾ. ಮಹಾಬಲೇಶ್ವರ ರಾವ್ ಅವರ ಅನುವಾದದ 'ಗಾಂಧೀ ಸಂಕಥನ ಬಹುಮುಖ ನೋಟ' ಕೃತಿಗಳನ್ನು ಬಿಡುಗಡೆ ಮಾಡಲಾಗುವುದು.

# ಬಳ್ಳಾರಿ ಚಲೋ ಪ್ರೇರಣೆಯಿಂದಲೇ ಕಾಂಗ್ರೆಸ್ ಪಾದಯಾತ್ರೆ

## ಶಿಕಾರಿಪುರದಿಂದಲೇ ರಾಜ್ಯದಲ್ಲಿ ಹೋರಾಟದ ಕಿಚ್ಚು ಹಚ್ಚಿದ್ದು: ಬಿ.ವೈ. ವಿಜಯೇಂದ್ರ

● ವಿಕ್ರಮ ವಾಹಿನಿ । ಚಿತ್ರದುರ್ಗ

ಬಿಜೆಪಿ ನಡೆಸಿದ 'ಬಳ್ಳಾರಿ ಚಲೋ' ಪಾದಯಾತ್ರೆಯ ಪ್ರೇರಣೆಯಿಂದಲೇ ಇಂದು ಕಾಂಗ್ರೆಸ್ ಪಕ್ಷ ಪಾದಯಾತ್ರೆ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವ್ಯಂಗ್ಯವಾಡಿದರು.

ಚಿತ್ರದುರ್ಗದ ಜಯದೇವ ಕ್ರೀಡಾಂಗಣದಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳದ ವತಿಯಿಂದ ಪ್ರತಿಷ್ಠಾಪಿಸಿರುವ 'ಹಿಂದೂ ಮಹಾಗಣಪತಿ'ಯ ದರ್ಶನ ಪಡೆದ ಬಳಿಕ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು.

"ಕೆಪಿಸಿಸಿ ಅಧ್ಯಕ್ಷರು ನನ್ನದೇ ಕ್ಷೇತ್ರದಲ್ಲಿ ಪಾದಯಾತ್ರೆ ನಡೆಸುತ್ತಿದ್ದಾರೆ. ರಾಜ್ಯದಲ್ಲಿ ಹೋರಾಟದ ಕಿಚ್ಚು ಹಚ್ಚಿಸಿದ ಕೀರ್ತಿ ಶಿಕಾರಿಪುರಕ್ಕೆ ಸಲ್ಲುತ್ತದೆ. ಕೆಪಿಸಿಸಿ ಅಧ್ಯಕ್ಷರಿಗೆ ಒಳ್ಳೆಯದಾಗಲಿ ಎಂದು ನಾನು ಹಾರೈಸುತ್ತೇನೆ," ಎಂದು ವಿಜಯೇಂದ್ರ ಹೇಳಿದರು.

**ಹರಿಪ್ರಸಾದ್‌ಗೆ ವಿಜಯೇಂದ್ರ ತಿರುಗೇಟು:** ತಮ್ಮ ರಾಜಕೀಯ ಅನುಭವದ ಕುರಿತು ಹಿರಿಯ ಕಾಂಗ್ರೆಸ್ ನಾಯಕ ಬಿ.ಕೆ. ಹರಿಪ್ರಸಾದ್ ಮಾಡಿರುವ ಟೀಕೆಗೆ ತಿರುಗೇಟು ನೀಡಿದ ವಿಜಯೇಂದ್ರ, "ನಾನು ಎಲ್‌ಕೆಜಿ ವಿದ್ಯಾರ್ಥಿ ಇರಬಹುದು, ಮೊದಲ ಸಲ ಶಾಸಕನಾಗಿರಬಹುದು.



ಆದರೆ ಹರಿಪ್ರಸಾದ್ ಅವರು ಪಿಎಚ್‌ಡಿ ಮಾಡಿದ್ದರೂ ಇದುವರೆಗೂ ನೇರ ಚುನಾವಣೆಯಲ್ಲಿ ಗೆದ್ದಿಲ್ಲ," ಎಂದು ತಿವಿದರು.

**"ಬ್ಯಾನರ್ ಹರಿದು ಹಾಕುವ ಕೀಳು ರಾಜಕಾರಣದ ಅಗತ್ಯ ನಮಗಿಲ್ಲ":** ಕೆಲವರು ಬ್ಯಾನರ್ ಹರಿದು ಹಾಕಿಸಿಕೊಂಡೇ ಪ್ರಚಾರ ಪಡೆಯುತ್ತಿದ್ದಾರೆ. ಅಂತಹ 420 ರಾಜಕಾರಣ ನಮಗೆ ಬೇಕಾಗಿಲ್ಲ," ಎಂದು ಅವರು ಕಟುವಾಗಿ ಟೀಕಿಸಿದರು.

ಆರ್‌ಟಿಜಿಎಸ್ ಮೂಲಕ ಹಣ ಪಡೆದಿರುವ ಕುರಿತ ಹರಿಪ್ರಸಾದ್ ಅವರ ಆರೋಪಕ್ಕೆ ಆಕ್ರೋಶ ವ್ಯಕ್ತಪಡಿಸಿದ ವಿಜಯೇಂದ್ರ, "ಹರಿಪ್ರಸಾದ್ ಅವರು ತಮ್ಮ ನಾಲಿಗೆ ಬಿಗಿ ಹಿಡಿದು ಮಾತನಾಡಬೇಕು. ಈ ಎಲ್ಲ ಆರೋಪಗಳು ನ್ಯಾಯಾಲಯದಲ್ಲಿ ಇತ್ಯರ್ಥವಾಗಿವೆ. ನಾನು ನಿರಪರಾಧಿ ಎಂದು ನ್ಯಾಯಾಲಯ ತೀರ್ಪು ನೀಡಿದೆ," ಎಂದು ಸ್ಪಷ್ಟಪಡಿಸಿದರು.

"ಹರಿಪ್ರಸಾದ್ ಅವರು ಹತಾಶರಾಗಿ ಮಾತನಾಡುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಅವರ ಕಾರ್ಯಕ್ರಮಗಳಿಗೂ ಅವರನ್ನು ಕರೆಯುತ್ತಿಲ್ಲ. ಹೀಗಾಗಿ ಪಾದಯಾತ್ರೆ ಮಾಡಿ ಅನುಕಂಪ ಗಿಟ್ಟಿಸಿಕೊಳ್ಳಲು ಅವರು ಪ್ರಯತ್ನಿಸುತ್ತಿದ್ದಾರೆ," ಎಂದು ವಿಜಯೇಂದ್ರ ಆರೋಪಿಸಿದರು.

**ಮಠಾಧೀಶರ ಕುರಿತ ಸರ್ಕಾರದ ಹೇಳಿಕೆಗೆ ಆಕ್ಷೇಪ**

ಮಠಾಧೀಶರು ಸರ್ಕಾರದ ಯೋಜನೆಗಳ ರಾಯಭಾರಿಗಳಾಗಬೇಕು ಎಂಬ ಹೇಳಿಕೆಗೆ ವಿಜಯೇಂದ್ರ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

"ರಾಜ್ಯದಲ್ಲಿ ಬರಗಾಲವಿದ್ದರೂ ರೈತರಿಗೆ ಸೂಕ್ತ ಪರಿಹಾರ ನೀಡದ ಕಾರಣಕ್ಕೆ ಇಂದು ಜನರು ಸರ್ಕಾರಕ್ಕೆ ಥೂ, ಛೀ ಎಂದು ಧಿಕ್ಕಾರ ಕೂಗುತ್ತಿದ್ದಾರೆ. ಮಠಾಧೀಶರು ನನ್ನ ಸೇವೆ ಮಾಡಬೇಕೆಂದು ಹೇಳುತ್ತಿದ್ದಾರೆ. ಆದರೆ ಎಲ್ಲವನ್ನೂ ಕಾಲವೇ ನಿರ್ಧರಿಸುತ್ತದೆ," ಎಂದು ಹೇಳಿದರು.

# ಸುಂದರಂ ಫೈನಾನ್ಸ್–ಜಿಎಂಟಿ ಎಂಜಿನಿಯರ್ಸ್ ಸಹಭಾಗಿತ್ವ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತದ ಪ್ರಮುಖ ಬ್ಯಾಂಕೇತರ ಹಣಕಾಸು ಸಂಸ್ಥೆಗಳಲ್ಲಿ ಒಂದಾದ ಸುಂದರಂ ಫೈನಾನ್ಸ್ ಲಿಮಿಟೆಡ್, ದಕ್ಷಿಣ ಭಾರತದ ಪ್ರಮುಖ ಲೋಹ ರೂಪಿಸುವ ಯಂತ್ರೋಪಕರಣಗಳು ಮತ್ತು ಸ್ವಯಂಚಾಲಿತ ಪರಿಹಾರಗಳ ಪೂರೈಕೆದಾರರಾದ ಜಿಎಂಟಿ ಎಂಜಿನಿಯರ್ಸ್ ಪ್ರೈವೇಟ್ ಲಿಮಿಟೆಡ್‌ನೊಂದಿಗೆ ಕಾರ್ಯತಂತ್ರದ ಸಹಭಾಗಿತ್ವಕ್ಕೆ ಮುಂದಾಗಿದೆ.

ಈ ಸಹಭಾಗಿತ್ವದ ಮೂಲಕ ಜಿಎಂಟಿ ಎಂಜಿನಿಯರ್ಸ್‌ನ ಸುಧಾರಿತ ಸಿಎನ್‌ಸಿ ಬಾಗಿಸುವ ಯಂತ್ರಗಳು, ನಾರಿನ ಲೇಸರ್ ಕತ್ತರಿಸುವ ವ್ಯವಸ್ಥೆಗಳು, ಪವರ್ ಪ್ರೆಸ್‌ಗಳು ಹಾಗೂ ಸ್ವಯಂಚಾಲಿತ ಉಪಕರಣಗಳ ಖರೀದಿಗೆ ಉತ್ಪಾದಕರಿಗೆ ತ್ವರಿತ, ಅನುಕೂಲಕರ ಮತ್ತು ಅಗತ್ಯಕ್ಕೆ ಅನುಗುಣವಾದ ಹಣಕಾಸು ಸೌಲಭ್ಯಗಳನ್ನು ಒದಗಿಸುವ ಉದ್ದೇಶ ಹೊಂದಲಾಗಿದೆ.

ಸಣ್ಣ ಮತ್ತು ಮಧ್ಯಮ ಪ್ರಮಾಣದ ಉತ್ಪಾದಕರು, ಜಾಬ್‌ಶಾಪ್‌ಗಳು ಹಾಗೂ ಕೈಗಾರಿಕಾ ಸಂಸ್ಥೆಗಳಿಗೆ ಅಗತ್ಯ ಬಂಡವಾಳದ ಲಭ್ಯತೆಯನ್ನು ಸುಲಭಗೊಳಿಸುವ ಮೂಲಕ ಆಧುನಿಕ ಉತ್ಪಾದನಾ ತಂತ್ರಜ್ಞಾನವನ್ನು ವೇಗವಾಗಿ ಅಳವಡಿಸಿಕೊಳ್ಳಲು ಈ ಸಹಭಾಗಿತ್ವ ನೆರವಾಗಲಿದೆ. ಸುಂದರಂ ಫೈನಾನ್ಸ್‌ನ ಸರಳೀಕೃತ ಹಣಕಾಸು ಪ್ರಕ್ರಿಯೆ ಹಾಗೂ ಜಿಎಂಟಿ ಎಂಜಿನಿಯರ್ಸ್‌ನ ಉನ್ನತ ಕಾರ್ಯಕ್ಷಮತೆಯ ಯಂತ್ರೋಪಕರಣಗಳ ಲಭ್ಯತೆ ಗ್ರಾಹಕರಿಗೆ ಉತ್ಪಾದನಾ ಸಾಮರ್ಥ್ಯ ವಿಸ್ತರಿಸಲು ಮತ್ತು ಉತ್ಪಾದಕತೆ ಹೆಚ್ಚಿಸಲು ಸಹಕಾರಿಯಾಗಲಿದೆ.

ಈ ಸಹಭಾಗಿತ್ವದ ಕುರಿತು ಮಾತನಾಡಿದ ಜಿಎಂಟಿ ಎಂಜಿನಿಯರ್ಸ್ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಬಿ.ಎಸ್. ಪ್ರಸಾದ್, ಸುಂದರಂ ಫೈನಾನ್ಸ್‌ನೊಂದಿಗೆ ಮಾಡಿಕೊಂಡಿರುವ ಸಹಭಾಗಿತ್ವವು ಗ್ರಾಹಕರಿಗೆ ಲೋಹ ರೂಪಿಸುವ ಯಂತ್ರೋಪಕರಣಗಳ ಖರೀದಿಗೆ ಸುಲಭ ಹಣಕಾಸು ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ದಕ್ಷಿಣ ಭಾರತದ ಉತ್ಪಾದಕರು ಸುಸ್ಥಿರ ಬೆಳವಣಿಗೆ ಸಾಧಿಸಲು ಅಗತ್ಯವಿರುವ ಹೆಚ್ಚಿನ ಸಾಮರ್ಥ್ಯದ ಸಿಎನ್‌ಸಿ ಬಾಗಿಸುವ ಯಂತ್ರಗಳು, ನಾರಿನ ಲೇಸರ್ ಕತ್ತರಿಸುವ ವ್ಯವಸ್ಥೆಗಳು ಮತ್ತು ಪವರ್ ಪ್ರೆಸ್‌ಗಳನ್ನು ಒದಗಿಸುವುದು ಸಂಸ್ಥೆಯ ಧ್ಯೇಯವಾಗಿದೆ. ತಕ್ಷಣ ಲಭ್ಯವಿರುವ ಯಂತ್ರೋಪಕರಣಗಳೊಂದಿಗೆ ಸುಂದರಂ ಫೈನಾನ್ಸ್‌ನ ವೇಗವಾದ ಮತ್ತು ಸರಳ ಹಣಕಾಸು ಸೌಲಭ್ಯಗಳು ದೊರೆಯುವುದರಿಂದ ಗ್ರಾಹಕರು ತಮ್ಮ ಉತ್ಪಾದನಾ ಸಾಮರ್ಥ್ಯವನ್ನು ಗರಿಷ್ಠಗೊಳಿಸಿ ಹೆಚ್ಚಿನ ಆರ್ಡರ್‌ಗಳನ್ನು ಪಡೆಯುವತ್ತ ಗಮನಹರಿಸಬಹುದಾಗಿದೆ ಎಂದು ಅವರು ತಿಳಿಸಿದರು. ಈ ಸಹಭಾಗಿತ್ವದ ಮೂಲಕ ಉತ್ಪಾದನಾ ವಲಯದ ಸಂಸ್ಥೆಗಳು ದೊಡ್ಡ ಪ್ರಮಾಣದ ಒಪ್ಪಂದಗಳನ್ನು ಕೈಗೆತ್ತಿಕೊಳ್ಳಲು ಅಗತ್ಯವಿರುವ ತಂತ್ರಜ್ಞಾನ ಮತ್ತು ಹಣಕಾಸಿನ ಸೌಲಭ್ಯವನ್ನು ಒಂದೇ ವ್ಯವಸ್ಥೆಯಲ್ಲಿ ಪಡೆಯಲು ಸಾಧ್ಯವಾಗಲಿದೆ.

# ಸದ್ಯದಲ್ಲೇ ಬಸ್ ಪ್ರಯಾಣ ದರ ಏರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಸರ್ಕಾರಿ ಸಾರಿಗೆ ನಿಗಮಗಳ ಬಸ್ ಪ್ರಯಾಣ ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ನಿವೃತ್ತ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಉನ್ನತ ಮಟ್ಟದ ಸಮಿತಿ ಒಂದೆರಡು ದಿನಗಳಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ನಗರದಲ್ಲಿ ಬುಧವಾರ ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನಿಗಮಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಪ್ರಯಾಣ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಹೇಳಿದರು. ಸಮಿತಿಯ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅನುಮೋದನೆ ಬಳಿಕ ದರ ಪರಿಷ್ಕರಣೆ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಕಳೆದ ಒಂದು ವರ್ಷದಲ್ಲಿ ಡೀಸೆಲ್ ದರ ಏರಿಕೆಯಾಗಿದ್ದು, ಇದರ ಪರಿಣಾಮ ಸಾರಿಗೆ ನಿಗಮಗಳಿಗೆ ವಾರ್ಷಿಕ ಸುಮಾರು ರೂ 8,000 ಕೋಟಿ ನಷ್ಟವಾಗುತ್ತಿದೆ ಎಂದು ಸಚಿವರು ತಿಳಿಸಿದರು.

**ಎರಡು ತಿಂಗಳಲ್ಲಿ ಶಕ್ತಿ ಸ್ಮಾರ್ಟ್ ಕಾರ್ಡ್:** ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಉದ್ದೇಶದಿಂದ ಸ್ಮಾರ್ಟ್ ಕಾರ್ಡ್ ವಿತರಿಸಲಾಗುವುದು. ಮೊದಲ ಹಂತದಲ್ಲಿ ಒಂದು



ಕೋಟಿ ಮಹಿಳೆಯರಿಗೆ ಕಾರ್ಡ್ ನೀಡಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಎರಡು ತಿಂಗಳಲ್ಲಿ ಕಾರ್ಡ್‌ಗಳನ್ನು ಸಿದ್ಧಪಡಿಸಿ ವಿತರಿಸಲಾಗುವುದು ಎಂದು ಹೇಳಿದರು.

ರಾಜ್ಯದ ಮಹಿಳೆಯರಿಗೆ ಮಾತ್ರ ಯೋಜನೆಯ ಸೌಲಭ್ಯ ಖಚಿತಪಡಿಸುವ ಉದ್ದೇಶದಿಂದ ಸ್ಮಾರ್ಟ್ ಕಾರ್ಡ್ ವ್ಯವಸ್ಥೆ ಜಾರಿಗೆ ತರಲಾಗುತ್ತಿದೆ ಎಂದರು.ಬೆಂಗಳೂರಿಗೆ 4,500 ವಿದ್ಯುತ್ ಬಸ್

ಕೇಂದ್ರ ಸರ್ಕಾರದ ಸಹಯೋಗದಲ್ಲಿ ಬಿಎಂಟಿಸಿಗೆ 4,500 ವಿದ್ಯುತ್ ಬಸ್‌ಗಳನ್ನು ಹಂತ ಹಂತವಾಗಿ ಸೇರ್ಪಡೆಗೊಳಿಸಲು ನಿರ್ಧರಿಸಲಾಗಿದೆ. ಇದರಿಂದ ನಗರದಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಮತ್ತಷ್ಟು ಬಲಗೊಳ್ಳಲಿದ್ದು, ಸಂಚಾರ ದಟ್ಟಣೆ ಕಡಿಮೆಯಾಗಲು ಸಹಕಾರಿಯಾಗಲಿದೆ ಎಂದು ಬೈರತಿ ಸುರೇಶ್ ಹೇಳಿದರು.

**ಅರ್ಧ ಹೆಲ್ಮೆಟ್ ಉತ್ಪಾದನೆಗೆ ಕಡಿವಾಣ:** ಸುರಕ್ಷಿತವಲ್ಲದ ಅರ್ಧ ಹೆಲ್ಮೆಟ್‌ಗಳ ಉತ್ಪಾದನೆ ಮತ್ತು ತಯಾರಿಕೆಯನ್ನು ನಿಷೇಧಿಸಲು ಸರ್ಕಾರ ನಿರ್ಧರಿಸಿದೆ. ಈ ಸಂಬಂಧ ನಿಯಮ ರೂಪಿಸಿ, ಅರ್ಧ ಹೆಲ್ಮೆಟ್ ತಯಾರಿಸುವ ಕಾರ್ಖಾನೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪ್ರಮುಖ ರಸ್ತೆಗಳಲ್ಲಿ ಮತ್ತೆ ಪ್ರತ್ಯೇಕ ಬಸ್ ಪಥ

ಮೆಟ್ರೋ ಕಾಮಗಾರಿಯಿಂದಾಗಿ ಸ್ಥಗಿತಗೊಂಡಿದ್ದ ಪ್ರತ್ಯೇಕ ಬಸ್ ಪಥವನ್ನು ಕಾಮಗಾರಿ ಪೂರ್ಣಗೊಂಡಿರುವ ಪ್ರಮುಖ ರಸ್ತೆಗಳಲ್ಲಿ ಮತ್ತೆ ಜಾರಿಗೆ ತರಲಾಗುವುದು. ಇದರಿಂದ ಬಸ್ ಸಂಚಾರಕ್ಕೆ ವೇಗ ದೊರೆಯಲಿದೆ ಎಂದು ತಿಳಿಸಿದರು.

**ಪಾದಚಾರಿ ಮಾರ್ಗದಲ್ಲಿ ವಾಹನ ನಿಲ್ಲಿಸಿದರೆ ರೂ 5,000 ದಂಡ:** ಪಾದಚಾರಿ ಮಾರ್ಗದಲ್ಲಿ ವಾಹನ ನಿಲುಗಡೆ ಮಾಡಿದರೆ ವಿಧಿಸಲಾಗುತ್ತಿರುವ ರೂ 500 ದಂಡವನ್ನು ರೂ 5,000ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಏಕಮುಖ ಸಂಚಾರ ರಸ್ತೆಯಲ್ಲಿ ನಿಯಮ ಉಲ್ಲಂಘಿಸಿ ವಾಹನ ಚಲಾಯಿಸಿದರೂ ರೂ 5,000 ದಂಡ ವಿಧಿಸಲಾಗುವುದು ಎಂದು ಸಚಿವರು ಹೇಳಿದರು.

# ಚುನಾವಣಾ ಆಯೋಗದ ವಿರುದ್ಧ ಇಂಡಿಯಾ ಒಕ್ಕೂಟದ ಹೋರಾಟ

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಕುರಿತು ವ್ಯಕ್ತಪಡಿಸಿರುವ ಆಕ್ಷೇಪಗಳು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಇಂಡಿಯಾ ಒಕ್ಕೂಟ ದೇಶಾದ್ಯಂತ ಪ್ರತಿಭಟನೆಗೆ ಕರೆ ನೀಡಿದೆ. ಅಕ್ಟೋಬರ್ 2ರಿಂದ 8ರವರೆಗೆ 'ಪ್ರಜಾಪ್ರಭುತ್ವ ಉಳಿಸಿ' ಜಾಥಾ ನಡೆಸಲು ಹಾಗೂ ಅಕ್ಟೋಬರ್ 6ರಂದು ಸಂಸತ್ತಿನ ಪ್ರತಿಪಕ್ಷ ಸದಸ್ಯರು ಚುನಾವಣಾ ಆಯೋಗದ ಕಚೇರಿಗೆ ಮೆರವಣಿಗೆ ನಡೆಸಲು ನಿರ್ಧರಿಸಲಾಗಿದೆ. ನವೆಂಬರ್ 1ರಂದು ದೆಹಲಿಯಲ್ಲಿ ಬೃಹತ್ ರ್‍ಯಾಲಿ ನಡೆಸಲು ತೀರ್ಮಾನಿಸಲಾಗಿದೆ.

ದೆಹಲಿಯ ಕಾನ್ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ಬುಧವಾರ ನಡೆದ ಇಂಡಿಯಾ ಒಕ್ಕೂಟದ ಪ್ರಮುಖ ನಾಯಕರ ಸಭೆಯಲ್ಲಿ ಈ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ವಿವಿಧ ಪಕ್ಷಗಳ ನಾಯಕರು ಸಭೆಯಲ್ಲಿ ಭಾಗವಹಿಸಿದ್ದರು. ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ ಹಾಗೂ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಆನ್‌ಲೈನ್ ಮೂಲಕ ಪಾಲ್ಗೊಂಡಿದ್ದರು.

**SIR ವಿರುದ್ಧ ಆಕ್ಷೇಪ:** SIR ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಹಾಗೂ ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಒಕ್ಕೂಟದ ನಾಯಕರು ಆರೋಪಿಸಿದರು. ಮುಖ್ಯ ಚುನಾವಣಾ ಆಯುಕ್ತರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ತಮ್ಮ ಆಕ್ಷೇಪಗಳನ್ನು ಮುಂದಿಟ್ಟರು. ಈ ಆರೋಪಗಳಿಗೆ ಚುನಾವಣಾ ಆಯೋಗದ ನಿಲುವು ಪ್ರತ್ಯೇಕವಾಗಿದ್ದು, ಖಚಿತವಾಗಿ ಸಂಬಂಧಿಸಿದ ಪ್ರಕ್ರಿಯೆ ಕುರಿತು ಆಯೋಗ ಇತ್ತೀಚೆಗೆ ಹಲವು ಸ್ಪಷ್ಟೀಕರಣಗಳನ್ನು ನೀಡಿದೆ.

ಸಭೆಯಲ್ಲಿ ಚುನಾವಣಾ ವ್ಯವಸ್ಥೆಯ ಕುರಿತು ಚರ್ಚೆ ನಡೆದಿದ್ದು, ಮುಂದಿನ ಚುನಾವಣೆಗಳನ್ನು ಇವಿಎಂಗಳ ಬದಲು ಮತಪತ್ರಗಳ ಮೂಲಕ ನಡೆಸಬೇಕು ಎಂಬ ಬೇಡಿಕೆಯನ್ನು ಒಕ್ಕೂಟದ ನಾಯಕರು ಮುಂದಿಟ್ಟರು. ಎಸ್‌ಐಆರ್ ಹಾಗೂ ಚುನಾವಣಾ ಅಕ್ರಮಗಳ ಕುರಿತು ಬಾಕಿ ಇರುವ ಪ್ರಕರಣಗಳ ವಿಚಾರಣೆಯನ್ನು ತ್ವರಿತಗೊಳಿಸುವಂತೆ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡುವ ಬಗ್ಗೆಯೂ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

ಇಂಡಿಯಾ ಒಕ್ಕೂಟದ ಕಾರ್ಯಕ್ರಮಗಳಿಗೆ ಎಲ್ಲ ವಿರೋಧ ಪಕ್ಷಗಳನ್ನೂ ಒಳಗೊಳ್ಳುವ ಪ್ರಯತ್ನ ನಡೆಯಲಿದೆ ಎಂದು ನಾಯಕರು ತಿಳಿಸಿದ್ದಾರೆ. ಆದರೆ ಸಭೆಗೆ ಕೆಲವು ಪ್ರಮುಖ ವಿರೋಧ ಪಕ್ಷಗಳ ನಾಯಕರು ಗೈರಾಗಿದ್ದರು. ಒಕ್ಕೂಟದ ಮುಂದಿನ ಹೋರಾಟದ ರೂಪುರೇಷೆ ಹಾಗೂ ವಿವಿಧ ರಾಜ್ಯಗಳಲ್ಲಿ ನಡೆಯಲಿರುವ ಪ್ರತಿಭಟನೆಗಳ ಕುರಿತು ಮುಂದಿನ ದಿನಗಳಲ್ಲಿ ವಿವರ ಪ್ರಕಟವಾಗುವ ನಿರೀಕ್ಷೆಯಿದೆ.

# MSP ಎಂದರೆ ಕನಿಷ್ಠ ಮಾರಾಟ ಬೆಲೆ: ಪ್ರಲ್ಹಾದ ಜೋಶಿ

● ವಿಕ್ರಮ ವಾಹಿನಿ । ನವದೆಹಲಿ

MSP ಎಂದರೆ 'ಮಿನಿಮಮ್ ಸಪೋರ್ಟ್ ಪ್ರೈಸ್' ಎಂಬ ತಪ್ಪು ಕಲ್ಪನೆ ಇದೆ. ವಾಸ್ತವವಾಗಿ ಸಕ್ಕರೆ ಕ್ಷೇತ್ರದಲ್ಲಿ MSP ಎಂದರೆ 'ಮಿನಿಮಮ್ ಸೆಲ್ಲಿಂಗ್ ಪ್ರೈಸ್' (ಕನಿಷ್ಠ ಮಾರಾಟ ಬೆಲೆ) ಮತ್ತು ಇದು ಸಕ್ಕರೆಗೆ ಅನ್ವಯಿಸುತ್ತದೆ. FRP ಕಬ್ಬಿಗೆ ಅನ್ವಯಿಸುವ ದರವಾಗಿದ್ದು, ಎರಡಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಸ್ಪಷ್ಟಪಡಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2026–27ನೇ ಸಕ್ಕರೆ ಹಂಗಾಮಿಗೆ ಕಬ್ಬಿನ FRP ಅನ್ನು ಕೇಂದ್ರ ಸರ್ಕಾರ ರೂ 365ಕ್ಕೆ ನಿಗದಿಪಡಿಸಿದೆ. ಪ್ರತಿ ವರ್ಷ ರೈತರ ಹಿತದೃಷ್ಟಿಯಿಂದ ಈಖಿಕ ಪರಿಷ್ಕರಿಸಲಾಗುತ್ತಿದ್ದು, ಮುಂದಿನ ಹಂಗಾಮಿಗೂ ದರ ಹೆಚ್ಚಳವಾಗುವ ನಿರೀಕ್ಷೆಯಿದೆ ಎಂದು ಹೇಳಿದರು. ಕೇಂದ್ರ ಸಚಿವ ಸಂಪುಟ 2026–27ನೇ ಹಂಗಾಮಿಗೆ 10.25ರಷ್ಟು ಮೂಲ ಸಕ್ಕರೆ ಇಳುವರಿಗೆ ಕ್ವಿಂಟಲ್‌ಗೆ ರೂ 365 ಈಖಿಕ ನಿಗದಿಪಡಿಸಿದೆ.

**ಅ.12ರಂದು ಸಭೆ:** ಕರ್ನಾಟಕದ ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು ಕೇಂದ್ರ ಸರ್ಕಾರ ಮುಕ್ತ ಚರ್ಚೆಗೆ ಸಿದ್ಧವಿದೆ. ರೈತ ಮುಖಂಡರೊಂದಿಗೆ ಅಕ್ಟೋಬರ್ 12ರಂದು ಸಭೆ ನಡೆಸುವ ನಿರೀಕ್ಷೆಯಿದ್ದು, ಕಬ್ಬಿನ ಬೆಲೆ, ಬಾಕಿ ಪಾವತಿ ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಸಮಗ್ರವಾಗಿ ಚರ್ಚಿಸಲಾಗುವುದು ಎಂದು ಜೋಶಿ ತಿಳಿಸಿದರು.



ರೈತರು ಪ್ರತಿಭಟನೆ ನಡೆಸುವ ಬದಲು ದೆಹಲಿಗೆ ಬಂದು ಸಂಬಂಧಪಟ್ಟ ಸಚಿವಾಲಯಗಳು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಬೇಕು. ರೈತರ ಸಮಸ್ಯೆಗಳನ್ನು ಪರಿಹರಿಸಲು ಕೇಂದ್ರ ಸರ್ಕಾರ ಸಿದ್ಧವಿದೆ ಎಂದು ಅವರು ಹೇಳಿದರು.

**ರೂ 16,600 ಕೋಟಿ ಬಾಕಿ ಪಾವತಿ:** ಕೇಂದ್ರ ಸರ್ಕಾರದ ಕ್ರಮಗಳಿಂದ ಕಬ್ಬು ಬೆಳೆಗಾರರಿಗೆ ಪಾವತಿ ವ್ಯವಸ್ಥೆಯಲ್ಲಿ ಸುಧಾರಣೆಯಾಗಿದೆ ಎಂದು ಜೋಶಿ ಹೇಳಿದರು. ರೈತರ ಬಾಕಿ ಪಾವತಿಗೆ ಕ್ರಮ ಕೈಗೊಳ್ಳಲಾಗಿದ್ದು, ಸಕ್ಕರೆ ಕಾರ್ಖಾನೆಗಳ ಆರ್ಥಿಕ ಸ್ಥಿರತೆಗೂ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಎಥೆನಾಲ್ ಉತ್ಪಾದನೆ ಮತ್ತು ಖರೀದಿಗೆ ಉತ್ತೇಜನ ನೀಡಿರುವುದರಿಂದ ಸಕ್ಕರೆ ಕಾರ್ಖಾನೆಗಳಿಗೆ ಹೆಚ್ಚುವರಿ ಆದಾಯದ ಅವಕಾಶ ದೊರೆತಿದೆ ಎಂದು ಅವರು ಹೇಳಿದರು. ಕೇಂದ್ರದ ಅಧಿಕೃತ ಮಾಹಿತಿಯಂತೆ 2025–26ನೇ ಎಥೆನಾಲ್ ಪೂರೈಕೆ ವರ್ಷದಲ್ಲಿ ಖರೀದಿ 1,200 ಕೋಟಿ ಲೀಟರ್‌ಗಿಂತ ಹೆಚ್ಚಾಗುವ ನಿರೀಕ್ಷೆಯಿದೆ.

**ಕರ್ನಾಟಕ ಸರ್ಕಾರ SAP ಜಾರಿಗೆ ತರಲಿ:** ಕೇಂದ್ರ ಸರ್ಕಾರ ಈಖಿಕ ನಿಗದಿಪಡಿಸಿದಂತೆ ರಾಜ್ಯ ಸರ್ಕಾರಕ್ಕೂ ಹೆಚ್ಚುವರಿ ಕಬ್ಬಿನ ದರ ನಿಗದಿಪಡಿಸಲು ಅವಕಾಶವಿದೆ. ಹೀಗಾಗಿ ಕರ್ನಾಟಕ ಸರ್ಕಾರವೂ ಖಿಂಕ (ರಾಜ್ಯ ಸಲಹಾ ಬೆಲೆ) ಜಾರಿಗೆ ತಂದು ಕಬ್ಬು ಬೆಳೆಗಾರರಿಗೆ ನೆರವಾಗಬೇಕು ಎಂದು ಜೋಶಿ ಸಲಹೆ ನೀಡಿದರು.

ಕಬ್ಬು ಬೆಳೆಗಾರರು, ಸಕ್ಕರೆ ಕಾರ್ಖಾನೆಗಳು ಹಾಗೂ ಗ್ರಾಹಕರ ಹಿತವನ್ನು ಸಮತೋಲನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ರಾಜ್ಯದಲ್ಲಿನ ಕಬ್ಬು ಬೆಲೆ ಹಾಗೂ ರೈತರ ಬೇಡಿಕೆಗಳ ಕುರಿತು ರಾಜ್ಯ ಸರ್ಕಾರವೂ ತನ್ನ ನಿಲುವು ಸ್ಪಷ್ಟಪಡಿಸಬೇಕು ಎಂದು ಅವರು ಹೇಳಿದರು.

ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರದ ಕೃಷಿ, ಆಹಾರ ಮತ್ತು ಪೆಟ್ರೋಲಿಯಂ ಸಚಿವಾಲಯಗಳು, ರಾಜ್ಯ ಸರ್ಕಾರ ಹಾಗೂ ರೈತ ಮುಖಂಡರೊಂದಿಗೆ ಸಮಾಲೋಚನೆ ನಡೆಸಲಾಗುವುದು.

ಕಬ್ಬಿನ ಬೆಲೆ ನಿಗದಿ, ಎಥೆನಾಲ್ ಉತ್ಪಾದನೆ ಹಾಗೂ ಸಕ್ಕರೆ ಕಾರ್ಖಾನೆಗಳ ಆರ್ಥಿಕ ಸ್ಥಿತಿಗತಿ ಸೇರಿದಂತೆ ಎಲ್ಲ ಅಂಶಗಳನ್ನು ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಲ್ಹಾದ ಜೋಶಿ ತಿಳಿಸಿದರು.

# ಅಡಕೆ ಹಾಳೆ ಬಳಸಿ ಎಥೆನಾಲ್ ಉತ್ಪಾದನೆ: ಮಂಗಳೂರು ವಿವಿ ವಿದ್ಯಾರ್ಥಿಗಳ ಪ್ರಯೋಗ ಯಶಸ್ವಿ

● ವಿಕ್ರಮ ವಾಹಿನಿ । ಂಗಳೂರು

ದೇಶದ ಇಂಧನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಹೊಸ ಪ್ರಯೋಗವನ್ನು ಮಂಗಳೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮಾಡಿದ್ದು, ಈ ಹಿನ್ನೆಲೆಯಲ್ಲಿ ಅಡಕೆ ಹಾಳೆ ಬಳಸಿ ಎಥೆನಾಲ್ ಉತ್ಪಾದಿಸುವ ಸಂಶೋಧನೆ, ಪ್ರಯೋಗ ಶಾಲೆಯಲ್ಲಿ ಯಶಸ್ಸು ಕಂಡಿದೆ.

ಚಾಮರಾಜನಗರ, ಮಂಡ್ಯ , ಬೆಳಗಾವಿ, ಬಾಗಲಕೋಟೆ, ಮೈಸೂರು ಸೇರಿದಂತೆ ವಿವಿಧ ಭಾಗಗಳಲ್ಲಿ ಕಬ್ಬಿನಿಂದ ಎಥೆನಾಲ್ ಉತ್ಪಾದನೆ ಮಾಡುತ್ತಿದ್ದು, ಇದೀಗ ಮಂಗಳೂರಿನ ವಿದ್ಯಾರ್ಥಿಗಳು ಅಡಕೆ ಹಾಳೆಯಲ್ಲಿ ಎಥೆನಾಲ್ ಉತ್ಪಾದನೆ ಮಾಡುವ ಪ್ರಯೋಗ ಯಶಸ್ವಿಯಾಗಿರುವುದರಿಂದ ಚಾಮರಾಜನಗರ ಸೇರಿದಂತೆ ಇನ್ನಿತರ ಜಿಲ್ಲೆಗಳಲ್ಲಿ ಈ ರೀತಿಯ ಪ್ರಯೋಗಕ್ಕೆ ಮುಂದಾಗಿದೆ.

ಮಂಗಳೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ ಪ್ರಾಜೆಕ್ಟ್‌ಗಾಗಿ ಅಡಕೆ ಹಾಳೆಗಳಿಂದ ಎಥೆನಾಲ್ ಸಂಶೋಧನೆ ಮಾಡಿದ್ದು, ಇದರ ವಿಸ್ತೃತ ರೂಪದ ಸಂಶೋಧನೆಗೆ ತಯಾರಿ ನಡೆಸಿದ್ದಾರೆ. ಆರಂಭಿಕ ಹಂತದ ಪ್ರಯೋಗಾಲಯದ ಸಂಶೋಧನೆಯಲ್ಲಿ ಅಡಕೆ ಹಾಳೆಯಿಂದ ಎಥೆನಾಲ್ ಉತ್ಪಾದನೆ ಸಾಧ್ಯತೆಯನ್ನು ಸಾಬೀತು ಪಡಿಸಿದೆ. ಇದು ಇನ್ನಷ್ಟು ಪ್ರಯೋಗಕ್ಕೆ ಮುನ್ನುಡಿ ಬರೆದಿದೆ.



ಈ ಹೊಸ ಪ್ರಯೋಗ ಯಶಸ್ಸು ಕಂಡರೆ ರಾಜ್ಯದ ಅಡಕೆ ಬೆಳೆಗಾರರ ಉಪ ಆದಾಯಕ್ಕೊಂದು ಮೂಲವಾಗಬಹುದು ಎಂದು ತಜ್ಞರು ಅಂದಾಜಿಸುತ್ತಿದ್ದಾರೆ.

ಡಾ. ಗೋಪಾಲ ಮರಾಠೆಯವರ ಸಂಶೋಧನಾ ಶಿಷ್ಯರಾಗಿರುವ ಡಾ. ಶಿವ ಎಸ್. ಮಾರ್ಗದರ್ಶನದಲ್ಲಿ ಈ ಪ್ರಾಯೋಗಿಕ ಸಂಶೋಧನೆ ನಡೆದಿದ್ದು, ಅಡಕೆ ಹಾಳೆಯನ್ನು ತಟ್ಟೆಗಳಿಗೆ ಉಪಯೋಗಿಸಿ ಉಳಿದ ತ್ಯಾಜ್ಯವನ್ನು ಬಳಸಿಕೊಂಡು ಈ ಸಂಶೋಧನೆ ನಡೆಸಲಾಗಿದೆ.

ವಿದ್ಯಾರ್ಥಿಗಳ ಈ ಸಂಶೋಧನೆ ಚಾಮರಾಜನಗರ ಜಿಲ್ಲೆಯ ಅಡಕೆ ಬೆಳೆಗಾರರು, ರೈತರು, ಚಿಂತಕರಲ್ಲಿ ಸಂತಸ ಮೂಡಿಸಿದ್ದು, ಎಥೆನಾಲ್ ಉತ್ಪಾದಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿ ರೈತರು ಆದಾಯ ದ್ವಿಗುಣಗೊಳ್ಳುವ ನಿಟ್ಟಿನಲ್ಲಿ ಶ್ರಮಿಸಬೇಕೆಂದ

ು ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಅಡಕೆ ಹಾಳೆಯಿಂದ ಎಥೆನಾಲ್ ಉತ್ಪಾದಿಸುವ ಮಂಗಳೂರು ವಿದ್ಯಾರ್ಥಿಗಳ ಸಂಶೋಧನೆ ಚಾಮರಾಜನಗರ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಆಸಕ್ತರಲ್ಲಿ ಇನ್ನಷ್ಟು ಪ್ರಯೋಗಕ್ಕೆ ಹೊಸ ಭಾಷ್ಯ ಬರೆದಿದೆ..

ಚಾಮರಾಜನಗರದ ರೈತ ಶಶಿಕುಮಾರ್ ಮಾತನಾಡಿ, ಅಡಕೆ ಬೆಳೆಯು ಸ್ಥಿರವಾಗಿರದೆ ಒಮ್ಮೊಮ್ಮೆ ಏರಿಳಿತಗಳು ಉಂಟಾಗುವುದರಿಂದ ಅಡಕೆ ಹಾಳೆಯಲ್ಲಿ ಎಥೆನಾಲ್ ಉತ್ಪಾದಿಸುವುದನ್ನು ವಿದ್ಯಾರ್ಥಿಗಳು ಸಾಬೀತುಪಡಿಸಿದ್ದಾರೆ.

**ಮಂಗಳೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಅಡಕೆ ಹಾಳೆಯ ತ್ಯಾಜ್ಯ ಬಳಸಿ ಎಥೆನಾಲ್ ಉತ್ಪಾದಿಸುವ ಪ್ರಯೋಗವನ್ನು ಪ್ರಯೋಗಾಲಯದ ಹಂತದಲ್ಲಿ ಯಶಸ್ವಿಯಾಗಿ ನಡೆಸಿದ್ದಾರೆ. ಸಂಶೋಧನೆ ಮುಂದಿನ ಹಂತಗಳಲ್ಲಿ ಯಶಸ್ವಿಯಾದರೆ ಅಡಕೆ ಬೆಳೆಗಾರರಿಗೆ ಪರ್ಯಾಯ ಆದಾಯದ ಮೂಲವಾಗುವ ಸಾಧ್ಯತೆಯಿದ್ದು, ರೈತರು ಹಾಗೂ ತಜ್ಞರು ಸರ್ಕಾರದ ಬೆಂಬಲಕ್ಕೆ ಮನವಿ ಮಾಡಿದ್ದಾರೆ.**

ಇದರಿಂದ ರೈತರಿಗೆ ಪರ್ಯಾಯ ಆದಾಯ ಸಿಗುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ. ಮತ್ತೊರ್ವ ರೈತ ಶೈಲೇಂದ್ರ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಡಕೆ ಹಾಳೆಯಿಂದ ಎಥೆನಾಲ್ ಉತ್ಪಾದಿಸುವುದರಿಂದ ರೈತ ಹಾಗೂ ರಾಷ್ಟ್ರದ ಅಭಿವೃದ್ಧಿಗೂ ಪೂರಕ ಎಂದು ಹೇಳಿದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಈ ಹೊಸ ಸಂಶೋಧನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಹಳ ಗಂಭೀರವಾಗಿ ಪರಿಗಣಿಸಿ ಎಥನಾಲ್ ಉತ್ಪಾದನೆಗೆ ಹೆಚ್ಚು ಆಸಕ್ತಿ ವಹಿಸಬೇಕು ಎಂದು ಮನವಿ ಮಾಡಿದರು.

ಯಳಂದೂರಿನ ಖಾರಾಪುರದ ವಿರಕ್ತ ಮಠದ ಮಠಾಧೀಶ ಬಸವರಾಜಸ್ವಾಮಿ ಒಡೆಯರ್ ಮಾತನಾಡಿ, ವಿದ್ಯಾರ್ಥಿಗಳ ಈ ಹೊಸ ಸಂಶೋಧನೆಯಿಂದ ರೈತರಿಗೆ ಆದಾಯ ತಂದುಕೊಡುವಲ್ಲಿ ನೆರವಾಗುವುದರ ಜೊತೆಗೆ ದೇಶ ಆರ್ಥಿಕ ಸ್ವಾವಲಂಬಿಯಾಗಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 177,